# ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 Vol: | ಸಂಚಿಕೆ: 74 Issue: | ರಾಯಚೂರು Raichur | 06-09-2026 | ಭಾನುವಾರ Sunday | ಪುಟ : 04 Page: | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685


ಏಷ್ಯಾಕಪ್ 2026: ಪಾಕಿಸ್ತಾನ ನೀಡಿದ ಅಲ್ಪಮೊತ್ತದ ರನ್ ಬೆನ್ನಟ್ಟಿ ಗೆದ್ದ ಭಾರತ



# ಸಾಲ ಮರುಪಾವತಿ ಒತ್ತಡಕ್ಕೆ ಮಹಿಳೆ ಅಪಹರಣ: ನಾಲ್ಕು ದಿನ ಅಕ್ರಮ ಬಂಧನ

ಬೆಂಗಳೂರು: ಸಾಲ ಮರುಪಾವತಿಸಿಲ್ಲ ಎಂಬ ಕಾರಣಕ್ಕೆ 30 ವರ್ಷದ ಮಹಿಳೆಯೊಬ್ಬರನ್ನು ಅಪಹರಿಸಿ, ನಾಲ್ಕು ದಿನಗಳ ಕಾಲ ಅಕ್ರಮವಾಗಿ ಬಂಧನದಲ್ಲಿಟ್ಟು ಹಲ್ಲೆ ನಡೆಸಿ, ಚಾಕುವಿನಿಂದ ಬೆದರಿಕೆ ಹಾಕಿರುವ ಆರೋಪ ಬೆಂಗಳೂರಿನಲ್ಲಿ ಕೇಳಿಬಂದಿದೆ. ಹಣ ಪಾವತಿಸುವಂತೆ ಒತ್ತಡ ಹೇರಲು ಮಹಿಳೆಯ ಅರೆಬೆತ್ತಲೆ ಸ್ಥಿತಿಯ ವಿಡಿಯೋ ಮಾಡಿ ಬೆದರಿಕೆ ಹಾಕಲಾಗಿದೆ ಎಂದು ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ.




ಕೆಲಸ ಹಾಗೂ ಹಣ ನೀಡುವುದಾಗಿ ನಂಬಿಸಿ ಮಹಿಳೆಯನ್ನು ಬೇರೆ ಸ್ಥಳಕ್ಕೆ ಕರೆಸಿಕೊಂಡು, ನಂತರ ಕುಂಬಳಗೋಡಿನ ಮನೆಯೊಂದರಲ್ಲಿ ಅಕ್ರಮವಾಗಿ ಇರಿಸಲಾಗಿತ್ತು ಎಂದು ದೂರಿನಲ್ಲಿ ಹೇಳಲಾಗಿದೆ. ಘಟನೆ ಸಂಬಂಧ ಚಂದ್ರ ಲೇಔಟ್ ಪೊಲೀಸರು ನಾಲ್ವರ ವಿರುದ್ಧ ಅಪಹರಣ, ಅಕ್ರಮ ಬಂಧನ, ಹಲ್ಲೆ, ಕ್ರಿಮಿನಲ್ ಬೆದರಿಕೆ ಸೇರಿದಂತೆ ವಿವಿಧ ಆರೋಪಗಳಡಿ ಪ್ರಕರಣ ದಾಖಲಿಸಿದ್ದಾರೆ.

ಭಾರತೀಯ ನ್ಯಾಯ ಸಂಹಿತೆಯ ವಿವಿಧ ಸೆಕ್ಷನ್‌ಗಳು ಹಾಗೂ ಮಾಹಿತಿ ತಂತ್ರಜ್ಞಾನ ಕಾಯ್ದೆಯ ಸೆಕ್ಷನ್ 66(E) ಅಡಿಯಲ್ಲಿ ಕ್ರೈಂ ನಂ. 283/2026 ಪ್ರಕರಣ ದಾಖಲಾಗಿದೆ.

ಎಫ್‌ಐಆರ್ ಪ್ರಕಾರ, ದೂರುದಾರ ಮಹಿಳೆ ಸುಮಾರು ಎರಡು ವರ್ಷಗಳ ಹಿಂದೆ ನಜತ್ ಬೇಗಂ ಅವರಿಂದ ವಾರದ ಕಂತಿನ ಆಧಾರದಲ್ಲಿ ₹50 ಸಾವಿರ ಹಾಗೂ ರೇಷ್ಮಾ ಬಾನು ಅವರಿಂದ ಮಾಸಿಕ ಬಡ್ಡಿ ಆಧಾರದಲ್ಲಿ ₹1 ಲಕ್ಷ ಸಾಲ

2ನೇ ಪುಟಕ್ಕೆ

## ಬಿಜೆಪಿ ಪಾದಯಾತ್ರೆ ಹತಾಶೆಯ ಪ್ರತಿಫಲ: ಸಚಿವ ಡಾ. ಅಜಯ್ ಸಿಂಗ್ ಟೀಕೆ

ರಾಯಚೂರು, ಸೆ.5: ರಾಜ್ಯದಲ್ಲಿ ಜನಪರ ವಿಚಾರಗಳಿಗಿಂತ ರಾಜಕೀಯ ಪ್ರದರ್ಶನಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿರುವ ಬಿಜೆಪಿ ನಾಯಕರು ಹತಾಶೆಯಿಂದ ಪಾದಯಾತ್ರೆ ನಡೆಸುತ್ತಿದ್ದಾರೆ. ಈಗ ನಡೆಯುತ್ತಿರುವ 10 ದಿನಗಳ ಈ ಪಾದಯಾತ್ರೆಯನ್ನು ಜ್ಞಾನೋದಯದ ಯಾತ್ರೆ ಎಂದೇ ಕರೆಯಬಹುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ವ್ಯಂಗ್ಯವಾಡಿದರು.



ರಾಯಚೂರು ನಗರದಲ್ಲಿ ಶನಿವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಬಿ. ನಾಗೇಂದ್ರ ಅವರ ರಾಜೀನಾಮೆ ವಿಚಾರವನ್ನೇ ಮುಂದಿಟ್ಟುಕೊಂಡು ಬಿಜೆಪಿ ಪಾದಯಾತ್ರೆ ಆರಂಭಿಸಿದೆ. ಪಕ್ಷಕ್ಕೆ ಮುಜುಗರ ಉಂಟಾಗಬಾರದು ಎಂಬ ಕಾರಣದಿಂದ ನಾಗೇಂದ್ರ ಅವರು ಈಗಾಗಲೇ ಸ್ವಯಂಪ್ರೇರಿತವಾಗಿ ರಾಜೀನಾಮೆ ನೀಡಿದ್ದಾರೆ. ಇದನ್ನು ಹೊರತುಪಡಿಸಿ ಬಿಜೆಪಿಗೆ ಯಾವುದೇ ಪ್ರಮುಖ ಜನಪರ ವಿಚಾರ ಸಿಗದ ಕಾರಣ ಈಗ ಜ್ಞಾನೋದಯಕ್ಕಾಗಿ ಪಾದಯಾತ್ರೆ ನಡೆಸುತ್ತಿರುವಂತಿದೆ ಎಂದು ಟೀಕಿಸಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದ್ದರೂ ವಿಧಾನಸಭಾ ಅಧಿವೇಶನದಲ್ಲಿ ಬಿಜೆಪಿ ನಾಯಕರು ರೈತರ ಸಂಕಷ್ಟ, ನೀರಿನ ಕೊರತೆ ಅಥವಾ ಬೆಳೆ ನಷ್ಟದ ಬಗ್ಗೆ ಸಮಗ್ರ ಚರ್ಚೆಗೆ ಮುಂದಾಗಲಿಲ್ಲ. ಎರಡು ವಾರಗಳ ಕಾಲ ರಾಜೀನಾಮೆ ವಿಚಾರವನ್ನೇ ಹಿಡಿದುಕೊಂಡು ಕಲಾಪಕ್ಕೆ ಅಡ್ಡಿಪಡಿಸಿದರು. ಜನಸಾಮಾನ್ಯರ ಸಮಸ್ಯೆಗಳಿಗಿಂತ ತಮ್ಮ ರಾಜಕೀಯ ಪ್ರತಿಷ್ಠೆಯೇ ಅವರಿಗೆ ಮುಖ್ಯವಾಗಿದೆ ಎಂದು ಆರೋಪಿಸಿದರು.

ಬಿಜೆಪಿಯೊಳಗಿನ ಭಿನ್ನಾಭಿಪ್ರಾಯಗಳೂ ಪಾದಯಾತ್ರೆಯಲ್ಲಿ ಗೋಚರಿಸುತ್ತಿವೆ. ಪಾದಯಾತ್ರೆಯ ಆರಂಭದ ದಿನ ಬಿ.ಎಸ್. ಯಡಿಯೂರಪ್ಪ, ಆರ್. ಅಶೋಕ್, ಛಲವಾದಿ ನಾರಾಯಣಸ್ವಾಮಿ, ಸಿ.ಟಿ. ರವಿ ಸೇರಿದಂತೆ ಹಲವು ಪ್ರಮುಖ

2ನೇ ಪುಟಕ್ಕೆ

## ಶಿಕ್ಷಕರು ಸಮಾಜದ ಸಾಧನೆಗೆ ಮಾರ್ಗದರ್ಶಕರು: ಡಾ.ಅಜಯ್ ಸಿಂಗ್

ರಾಯಚೂರು ಸೆಪ್ಟಂಬರ್ 05 (ಕರ್ನಾಟಕ ವಾರ್ತೆ): ಜಗತ್ತಿನಲ್ಲಿ ನನ್ನನ್ನು ರಾಷ್ಟ್ರಪತಿಯಾಗಿ ನೆನಪಿಸಿಕೊಳ್ಳುವುದಕ್ಕಿಂತ, ಒಬ್ಬ ಶಿಕ್ಷಕನಾಗಿ ನೆನಪಿಸಿಕೊಳ್ಳುವುದು ಅತ್ಯಂತ ಸೂಕ್ತ'' ಎಂದು ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು ಮಹತ್ವದ ಸಂದೇಶವನ್ನು ನೀಡಿದ್ದಾರೆ ಎಂದು ಸಣ್ಣ ನೀರಾವರಿ. ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಅಜಯ್ ಧರ್ಮಸಿಂಗ್ ಹೇಳಿದರು.



ಅವರು ಶನಿವಾರ ಜಿಲ್ಲಾಡಳಿತ. ಜಿಲ್ಲಾ ಪಂಚಾಯತ. ಮಹಾನಗರ ಪಾಲಿಕೆ ಹಾಗೂ ಶಾಲಾ ಶಿಕ್ಷಣ ಇಲಾಖೆ ರಾಯಚೂರು ಇವರ ಸಹಯೋಗದಲ್ಲಿ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮದಿರದಲ್ಲಿ ಹಮ್ಮಿಕೊಂಡಿದ್ದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ 139 ನೇ ಜನ್ಮದಿನೋತ್ಸವ ಹಾಗೂ ರಾಯಚೂರು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ಶಿಕ್ಷಕರ ಪ್ರಶಸ್ತಿ ಪ್ರಧಾನ ಸಮಾರಂಭ 2026-27 ನೇ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ವೈದ್ಯರು ಅನೇಕ ರೋಗಿಗಳಿಗೆ ಚಿಕಿತ್ಸೆ ನೀಡಬಹುದು, ಎಂಜಿನಿಯರ್‌ಗಳು ಹಲವು ಸೇತುವೆ ಮತ್ತು ಕಟ್ಟಡಗಳನ್ನು ನಿರ್ಮಿಸಬಹುದು, ವಕೀಲರು ಅನೇಕ ಸಮಸ್ಯೆಗಳನ್ನು ಬಗೆಹರಿಸಬಹುದು, ವಿಜ್ಞಾನಿಗಳು ಹೊಸ ಆವಿಷ್ಕಾರಗಳನ್ನು ಮಾಡಬಹುದು. ಆದರೆ ಇವರೆಲ್ಲರ ಜೀವನದಲ್ಲೂ ಅವರನ್ನು ಮುನ್ನಡೆಸಿದ ಒಬ್ಬ ಶಿಕ್ಷಕ ಇದ್ದೇ ಇರುತ್ತಾರೆ. "ಪ್ರತಿಯೊಬ್ಬರ ಸಾಧನೆಯ ಹಿಂದೆ ಒಬ್ಬ ಶಿಕ್ಷಕನ ಮಾರ್ಗದರ್ಶನವಿದೆ ಎಂಬುದನ್ನು ನಾವು ಅರ್ಥಮಾಡಿಕೊಳ್ಳಬೇಕು'' ಎಂದು ಅವರು ಹೇಳಿದರು.

ಮನುಷ್ಯನ ಜೀವನದಲ್ಲಿ ಗುರುಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಮುಂದೆ ಗುರಿ ಹಿಂದೆ ಗುರು ಇದ್ದರೆ

2ನೇ ಪುಟಕ್ಕೆ

## ಜನರ ಬಳಿಗೆ ಆಡಳಿತ, ಸಮಸ್ಯೆಗಳಿಗೆ ತ್ವರಿತ ಪರಿಹಾರವೇ ಪ್ರಜಾಸೇವೆಯ ಆಶಯ: ಬಸನಗೌಡ ದದ್ದಲ್

ರಾಯಚೂರು: ಜನರ ಬಳಿಗೆ ಆಡಳಿತವನ್ನು ಕೊಂಡೊಯ್ದು, ಸಾರ್ವಜನಿಕರ ಸಮಸ್ಯೆಗಳನ್ನು ನೇರವಾಗಿ ಆಲಿಸಿ, ಸಾಧ್ಯವಾದಷ್ಟು ಸ್ಥಳದಲ್ಲಿಯೇ ತ್ವರಿತ ಪರಿಹಾರ ಕಲ್ಪಿಸುವುದೇ ಪ್ರಜಾಸೇವಾಸೇವೆ ಕಾರ್ಯಕ್ರಮದ ಮುಖ್ಯ ಆಶಯವಾಗಿದೆ ಎಂದು ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಹೇಳಿದರು.



ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಯಾಪಲದಿನ್ನಿ ಗ್ರಾಮದಲ್ಲಿ ಆಯೋಜಿಸಿದ್ದ ಪ್ರಜಾಸೇವಾಸೇವೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಮೊದಲ ಸಭೆ ನಡೆಸಿ ಅವರು ಮಾತನಾಡಿದರು.

ಸರ್ಕಾರದ ವಿವಿಧ ಇಲಾಖೆಗಳ ಸೇವೆಗಾಗಿ ಸಾರ್ವಜನಿಕರು ಕಚೇರಿಯಿಂದ ಕಚೇರಿಗೆ ಅಲೆದಾಡುವ ಪರಿಸ್ಥಿತಿಯನ್ನು ತಪ್ಪಿಸಿ, ಅವರ ಅಹವಾಲುಗಳನ್ನು ಒಂದೇ ವೇದಿಕೆಯಲ್ಲಿ ಸ್ವೀಕರಿಸಿ ಪರಿಹಾರ ಒದಗಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜನರ ಸಮಸ್ಯೆಗಳನ್ನು ಅಧಿಕಾರಿಗಳು ಸ್ಥಳದಲ್ಲಿಯೇ ಆಲಿಸಿ, ತಕ್ಷಣ ಪರಿಹರಿಸಬಹುದಾದ ಅರ್ಜಿಗಳನ್ನು ವಿಳಂಬವಿಲ್ಲದೆ ವಿಲೇವಾರಿ ಮಾಡಬೇಕು ಎಂದು ಸೂಚಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮಸ್ಥರು ತಮ್ಮ ವಿವಿಧ ಸಮಸ್ಯೆಗಳು, ಬೇಡಿಕೆಗಳು ಹಾಗೂ ಸರ್ಕಾರಿ ಸೌಲಭ್ಯಗಳಿಗೆ ಸಂಬಂಧಿಸಿದ ಅರ್ಜಿಗಳನ್ನು ನೇರವಾಗಿ ಸಲ್ಲಿಸಿದರು. ಒಟ್ಟು 475 ಅರ್ಜಿಗಳು ಸ್ವೀಕೃತವಾಗಿದ್ದು, ಈ ಪೈಕಿ 423 ಅರ್ಜಿಗಳಿಗೆ ಸ್ಥಳದಲ್ಲಿಯೇ ಪರಿಹಾರ ಕಲ್ಪಿಸಿ ವಿಲೇವಾರಿ ಮಾಡಲಾಯಿತು.

ಉಳಿದ 52 ಅರ್ಜಿಗಳು ವಿವಿಧ ಕಾರಣಗಳಿಂದ ಬಾಕಿ ಉಳಿದಿದ್ದು, ಅವುಗಳನ್ನು ಸಂಬಂಧಿಸಿದ ಇಲಾಖೆಗಳ ಮೂಲಕ ತ್ವರಿತವಾಗಿ ಪರಿಶೀಲಿಸಿ, ಅಗತ್ಯ ಕ್ರಮ

2ನೇ ಪುಟಕ್ಕೆ

# ಸಾರ್ವಜನಿಕರ ಕುಂದುಕೊರತೆಗಳನ್ನು ಸ್ಥಳದಲ್ಲೇ ಆಲಿಸಿ, ತ್ವರಿತವಾಗಿ ಪರಿಹಾರ: ಡಾ.ಅಜಯ್ ಸಿಂಗ್

ರಾಯಚೂರು ಸೆಪ್ಟಂಬರ್ 05 (ಕರ್ನಾಟಕ ವಾರ್ತೆ): ಸರ್ಕಾರದ ಮಹತ್ವಾಕಾಂಕ್ಷೆಯ ಪ್ರಜಾಸೇವೆ ಆಂದೋಲನದ ಕಾರ್ಯಕ್ರಮವು ಕೇವಲ ರಾಜಧಾನಿ ಬೆಂಗಳೂರು ನಗರಕ್ಕೆ ಮಾತ್ರ ಸೀಮಿತವಾಗದೆ, ರಾಜ್ಯದ ಪ್ರತಿಯೊಂದು ಜಿಲ್ಲಾ ಹಾಗೂ ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಆಡಳಿತ ವ್ಯವಸ್ಥೆಯನ್ನು ಜನರಿಗೆ ಮತ್ತಷ್ಟು ಹತ್ತಿರವಾಗಿಸುವುದಾಗಿದೆ. ಸಾರ್ವಜನಿಕರ ಕುಂದುಕೊರತೆಗಳನ್ನು ಸ್ಥಳದಲ್ಲೇ ಆಲಿಸಿ, ತ್ವರಿತವಾಗಿ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಈ ವಿನೂತನ ಜನಪರ ಕಾರ್ಯಕ್ರಮಕ್ಕೆ ಚಾಲನೆ ಇಂದು ನೀಡಲಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಅವರು ಹೇಳಿದರು.



ಜಿಲ್ಲೆಯ ಮಾನ್ವಿ ಪಟ್ಟಣದ ಭಾಷುಮಿಯ ಸಾಹುಕಾರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ರಾಯಚೂರು ಇವರ ವತಿಯಿಂದ ತಾಲೂಕು ಮಟ್ಟದ ಪ್ರಜಾಸೇವೆ ಆಂದೋಲನ -2026ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಆಡಳಿತ ವ್ಯವಸ್ಥೆಯು ಜನಸಾಮಾನ್ಯರ ಬಾಗಿಲಿಗೆ ತೆರಳಿ ಅವರ ಕಷ್ಟ-ಸುಖಗಳಲ್ಲಿ ಭಾಗಿದಾರರಾಗಬೇಕು ಮತ್ತು ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂಬುದು ಸರ್ಕಾರದ ಮುಖ್ಯ ಗುರಿಯಾಗಿದೆ. ಕಲ್ಯಾಣ ಕರ್ನಾಟಕ ಭಾಗ ಹಿಂದುಳಿದಿರುವಿಕೆಯ ಹಣೆಪಟ್ಟಿಯನ್ನು ಕಳಚಲು ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳನ್ನು ಮಹತ್ವಾಕಾಂಕ್ಷೆಯ ಜಿಲ್ಲೆಗಳನ್ನಾಗಿ ಘೋಷಿಸಲಾಗಿದ್ದು, ಈ ನಿಟ್ಟಿನಲ್ಲಿ ಮಾನವಿ ತಾಲೂಕಿನಿಂದ ಈ ಅಭಿಯಾನವನ್ನು ಆರಂಭಿಸಲಾಗಿದೆ ಎಂದರು.

ಈ ಪ್ರಜಾಸೇವಾ ಕಾರ್ಯಕ್ರಮವು ಕೇವಲ ಒಂದು ದಿನಕ್ಕೆ ಸೀಮಿತವಾಗಿಲ್ಲದೆ, ಪ್ರತಿ ಶನಿವಾರವೂ ನಿರಂತರವಾಗಿ ಜರುಗಲಿದೆ. ಜಿಲ್ಲಾಧಿಕಾರಿಗಳು, ತಾಲೂಕು ಮಟ್ಟದ ಶಾಸಕರು ಮತ್ತು ಸಂಬಧಿತ ಅಧಿಕಾರಿಗಳು ಇದರಲ್ಲಿ ಸಕ್ರಿಯವಾಗಿ ಭಾಗವಹಿಸಲಿದ್ದಾರೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವನಾಗಿ ನಾನು ಪ್ರತಿ ತಿಂಗಳ ಮೊದಲನೇ ಮತ್ತು ಮೂರನೇ ವಾರದ ಶನಿವಾರಗಳಂದು ನಿರ್ದಿಷ್ಟ ತಾಲೂಕುಗಳಲ್ಲಿ ಖುದ್ದಾಗಿ ಉಪಸ್ಥಿತರಿದ್ದು, ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಲಿದ್ದೇನೆ. ಉಳಿದ ಶನಿವಾರಗಳಲ್ಲಿ ಸ್ಥಳೀಯ ಶಾಸಕರು ಹಾಗೂ ತಾಲೂಕು ಮಟ್ಟದ ಆಡಳಿತಾಧಿಕಾರಿಗಳು ಈ ಕಾರ್ಯಕ್ರಮ ಮುನ್ನಡೆಸಲಿದ್ದಾರೆ. ಕೇವಲ ಮಾನವಿ ಅಷ್ಟೇ ಅಲ್ಲದೆ, ಒಟ್ಟಾರೆ ಕರ್ನಾಟಕ ರಾಜ್ಯದ ಎಲ್ಲಾ 224 ಕ್ಷೇತ್ರಗಳಲ್ಲೂ ಈ ಜನಪರ ಆಡಳಿತ ಕಾರ್ಯಕ್ರಮವು ಅತ್ಯಂತ ವ್ಯವಸ್ಥಿತವಾಗಿ ಜಾರಿಯಲ್ಲಿದೆ ಎಂದರು.



ಜನಪರ ಯೋಜನೆಗಳು: ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ ಯೋಜನೆ, ಯುವನಿಧಿ ಸೇರಿದಂತೆ ವಿವಿಧ ಯೋಜನೆಗಳ ಮೂಲಕ ಜನಸಾಮಾನ್ಯರಿಗೆ ನೆರವು ನೀಡಲಾಗುತ್ತಿದೆ. ಪಿಂಚಣಿ ಹಾಗೂ ಪಡಿತರ ಚೀಟಿಗಳ ವಿತರಣೆಯೂ ಸೇರಿದಂತೆ ಹಲವು ಸೌಲಭ್ಯಗಳನ್ನು ಒದಗಿಸಲಾಗಿದೆ ಎಂದರು.

ರಾಯಚೂರು ಜಿಲ್ಲೆಯ ಅಭಿವೃದ್ಧಿಗೆ ಒತ್ತು: ರಾಜ್ಯದಲ್ಲಿ ಭೀಕರ ಬರಗಾಲವಿದ್ದ ಸಂದರ್ಭದಲ್ಲಿಯೂ ಸರ್ಕಾರವು ರೈತರ ಸಂಕಷ್ಟಕ್ಕೆ ಸ್ಪಂದಿಸಿದೆ. ರಾಯಚೂರು ಜಿಲ್ಲೆಯ ಐದು ತಾಲೂಕುಗಳು ಬರಪೀಡಿತ ಎಂದು ಈಗಾಗಲೇ ಘೋಷಣೆಯಾಗಿದ್ದು, ಉಳಿದ 3 ತಾಲೂಕುಗಳನ್ನೂ ಸಹ ಬರಪೀಡಿತವೆಂದು ಘೋಷಿಸುವಂತೆ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹೇಳಿದರು.

18 ಕೋಟಿ ರೂಪಾಯಿ ಅನುದಾನ ಹಂಚಿಕೆ: ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ವತಿಯಿಂದ ಹಲವು ಕೆಲಸ ಕಾರ್ಯಗಳನ್ನು ಕೈಗೊಳ್ಳಲಾಗಿದೆ. ಕಳೆದ ಮೂರು ವರ್ಷಗಳಲ್ಲಿ ಒಟ್ಟು 18,000

2ನೇ ಪುಟಕ್ಕೆ

## ಪ್ರಜಾಸೇವೆ ಆಂದೋಲನ ಕಾರ್ಯಕ್ರಮದಲ್ಲಿ ಗಮನ ಸೆಳೆದ ವಿವಿಧ ಮಳಿಗೆಗಳು ಜಿಲ್ಲಾ ಉಸ್ತುವಾರಿ ಸಚಿವರಿಂದ ಚಾಲನೆ

ರಾಯಚೂರು ಸೆಪ್ಟಂಬರ್ 05 (ಕರ್ನಾಟಕ ವಾರ್ತೆ): ಜಿಲ್ಲೆಯ ಮಾನ್ವಿ ಪಟ್ಟಣದ ಭಾಷುಮಿಯ ಸಾಹುಕಾರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ರಾಯಚೂರು ಇವರ ವತಿಯಿಂದ ತಾಲೂಕು ಮಟ್ಟದ ಪ್ರಜಾಸೇವೆ ಆಂದೋಲನ-2026ರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಯ ಮಳಿಗೆಗಳು ಸಾರ್ವಜನಿಕರ ಗಮನ ಸೆಳೆದವು.



ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್, ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್.ಭೋಸರಾಜು, ಮಾನ್ವಿ ಶಾಸಕ ಹಂಪಯ್ಯ ನಾಯಕ ಹಾಗೂ ಜಿಲ್ಲಾಧಿಕಾರಿ ಪೂವಿತಾ ಎಸ್ ಸೇರಿದಂತೆ ವಿವಿಧ ಗಣ್ಯರು ಮಳಿಗೆಗಳಿಗೆ ಚಾಲನೆ ನೀಡಿ, ವೀಕ್ಷಣೆ ಮಾಡಿದರು.

ಗಮನ ಸೆಳೆದ ಮಳಿಗೆಗಳು: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ 12 ಮಾರಕ ರೋಗಗಳಿಂದ ರಕ್ಷಣೆ, ಡೆಂಗ್ಯೂ , ಚಿಕುಂಗುನ್ಯಾ ಜ್ವರ ತಡೆ, ನಾಯಿ ಕಡಿತದಿಂದ ರೇಬಿಸ್, ವಾಂತಿ ಭೇಧಿ ಪ್ರಕರಣಗಳ, ಮಾನವಿ ಆರೋಗ್ಯ ಭಂಡಾರದ ವತಿಯಿಂದ ಆರೋಗ್ಯಕರ ಜೀವನಕ್ಕಾಗಿ ಆರೋಗ್ಯಕರ ಅನ್ನ, ರಾಯಚೂರು ತೋಟಗಾರಿಕೆ ಇಲಾಖೆಯ ರೈತರಿಗೆ ಸಿಗುವ ಪ್ರಮುಖ ಯೋಜನೆಗಳ ಕುರಿತು ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಬೇಟಿ ಬಚಾವೋ, ಬೇಟಿ ಪಡಾವೋ, ಹೆಣ್ಣು ಮಕ್ಕಳನ್ನು ರಕ್ಷಿಸೋಣ-ಹೆಣ್ಣುಮಕ್ಕಳನ್ನು ಓದಿಸೋಣ ಎಂಬ ಕಾರ್ಯಕ್ರಮ ಹಾಗೂ ಕೃಷಿ ಇಲಾಖೆಯಿಂದ ವಿವಿಧ ಕೃಷಿ ಉಪಕರಣಗಳು ವಿತರಿಸಿ, ವಿವಿಧ ಇಲಾಖೆಯ ಮಳಿಗೆಗಳ ಮೂಲಕ ಸಾರ್ವಜನಿರಿಗೆ ಜಾಗೃತಿ ಮೂಡಿಸಲಾಯಿತು.

ಪ್ರಜಾಸೇವೆಯಡಿ

2ನೇ ಪುಟಕ್ಕೆ

## ದೌರ್ಜನ್ಯ ಪ್ರಕರಣಗಳ ಸಂತ್ರಸ್ತ ಕುಟುಂಬಗಳಿಗೆ ಸಮಗ್ರ ಪುನರ್ವಸತಿ ಕಲ್ಪಿಸಿ: ಮಹೇಂದ್ರ ಕುಮಾರ್ ಮಿತ್ರ

ರಾಯಚೂರು, ಸೆ.5: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರ ಮೇಲಿನ ದೌರ್ಜನ್ಯ ತಡೆಗೆ ಇರುವ ಕಾನೂನುಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದರ ಜೊತೆಗೆ, ದೌರ್ಜನ್ಯ ಪ್ರಕರಣಗಳಲ್ಲಿ ಮೃತಪಟ್ಟವರ ಕುಟುಂಬಗಳಿಗೆ ನಿಯಮಾನುಸಾರ ಪರಿಹಾರ, ಪಿಂಚಣಿ, ಕೃಷಿ ಭೂಮಿ, ವಸತಿ ಹಾಗೂ ಕುಟುಂಬದ ಸದಸ್ಯರಿಗೆ ಸರ್ಕಾರಿ ಉದ್ಯೋಗ ಸೇರಿದಂತೆ ಸಮಗ್ರ ಪುನರ್ವಸತಿ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಮಹೇಂದ್ರ ಕುಮಾರ್ ಮಿತ್ರ ಆಗ್ರಹಿಸಿದರು.




ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾರತೀಯ ಸಮಾಜದಲ್ಲಿ ಜಾತಿ ವ್ಯವಸ್ಥೆಯು ಕಾಲಕ್ರಮೇಣ ಗಟ್ಟಿಯಾದ ಸಾಮಾಜಿಕ ವಿಭಜನೆಗೆ ರೂಪಾಂತರಗೊಂಡಿದ್ದು, ಅದರ ಪರಿಣಾಮವಾಗಿ ಅಸಮಾನತೆ ಹಾಗೂ ಅಸ್ಪೃಶ್ಯತೆ ಮತ್ತಷ್ಟು ಬೇರೂರಿತು ಎಂದು ಅಭಿಪ್ರಾಯಪಟ್ಟರು.

ಅಸ್ಪೃಶ್ಯತೆಯ ಐತಿಹಾಸಿಕ ಹಿನ್ನೆಲೆಯ ಕುರಿತು ಪ್ರಸ್ತಾಪಿಸಿದ ಅವರು, ಚಂಡಾಲ ಎಂಬ ಪದವು ಒಂದೇ ಸಮುದಾಯಕ್ಕೆ ಸೀಮಿತವಾಗಿರಲಿಲ್ಲ. ಸಾಮಾಜಿಕ ವಿಭಜನೆಯ ವಿವಿಧ ರೂಪಗಳು ಕಾಲಕ್ರಮೇಣ ಹಲವು ಸಮುದಾಯಗಳ ಮೇಲೆ ಪರಿಣಾಮ ಬೀರಿವೆ. ಈ ಹಿನ್ನೆಲೆಯಲ್ಲಿ ಮನುಸ್ಮೃತಿ ಸೇರಿದಂತೆ ಪುರಾತನ ಸಾಮಾಜಿಕ ವ್ಯವಸ್ಥೆ ಮತ್ತು ಅಸ್ಪೃಶ್ಯತೆಯ ಮೂಲಗಳ ಕುರಿತು ಗಂಭೀರ ಅಧ್ಯಯನ ಹಾಗೂ ಚರ್ಚೆ ನಡೆಯಬೇಕಿದೆ ಎಂದು ಹೇಳಿದರು.

ಅನುಸೂಚಿತ ಜಾತಿ

2ನೇ ಪುಟಕ್ಕೆ

# ಬೀದಿ ದೀಪಗಳ ನಿರ್ವಹಣೆ ಕುರಿತು ಪಾಲಿಕೆಯಿಂದ ಸಹಾಯವಾಣಿ ಆರಂಭ

ರಾಯಚೂರು ಸೆಪ್ಟಂಬರ್ 05 (ಕರ್ನಾಟಕ ವಾರ್ತೆ): ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವಿವಿಧ ಪ್ರದೇಶಗಳಲ್ಲಿ ಬೀದಿ ದೀಪಗಳು ಕಾರ್ಯನಿರ್ವಹಿಸದಿರುವುದು, ದೀಪಗಳು ಹಾಳಾಗಿರುವುದು, ದೀಪದ ಕಂಬಗಳಿಗೆ ಸಂಬಧಿಸಿದ ಸಮಸ್ಯೆಗಳು ಹಾಗೂ ಬೀದಿ ದೀಪಗಳ ನಿರ್ವಹಣೆಗೆ ಸಂಬಧಿಸಿದ ಇತರೆ ಯಾವುದೇ ದೂರುಗಳು ಕಂಡುಬದಲ್ಲಿ, ಸಾರ್ವಜನಿಕರು ತಮ್ಮ ದೂರುಗಳನ್ನು ಸಹಾಯವಾಣಿಗೆ ಸಂಪರ್ಕ ಮಾಡಿ ದೂರು ದಾಖಲು ಮಾಡುಬಹುದಾಗಿದೆ ಎಂದು ಪಾಲಿಕೆಯ ಅಭಿವೃದ್ಧಿ ವಿಭಾಗದ ಉಪ ಆಯುಕ್ತರು ತಿಳಿಸಿದ್ದಾರೆ.

ಬೀದಿ ದೀಪಗಳ ದೂರುಗಳಿಗಾಗಿ ಸಹಾಯವಾಣಿ ಸಂಖ್ಯೆ: 7676842176 ಅಥವಾ 08532-221136ಗೆ ಸಾರ್ವಜನಿಕರು ತಮ್ಮ ಪ್ರದೇಶದ ಹೆಸರು, ಬೀದಿ/ಸ್ಥಳದ ವಿವರ ಹಾಗೂ ಸಮಸ್ಯೆಯ ಸ್ವರೂಪವನ್ನು ಸ್ಪಷ್ಟವಾಗಿ ತಿಳಿಸುವ ಮೂಲಕ ದೂರು ದಾಖಲಿಸಬಹುದಾಗಿದೆ.

ನಗರದ ರಸ್ತೆಗಳಲ್ಲಿ ಸಾರ್ವಜನಿಕರ ಸುರಕ್ಷತೆ ಹಾಗೂ ಸುಗಮ ಸಂಚಾರಕ್ಕೆ ಬೀದಿ ದೀಪಗಳ ವ್ಯವಸ್ಥೆ ಅತ್ಯಂತ ಅವಶ್ಯಕವಾಗಿರುವುದರಿಂದ ಯಾವುದೇ ಬೀದಿ ದೀಪದ ದೋಷ ಕಂಡುಬದಲ್ಲಿ ತಕ್ಷಣವೇ ಮೇಲ್ಕಂಡ ಸಹಾಯವಾಣಿ ಸಂಖ್ಯೆಗೆ ಮಾಹಿತಿ ನೀಡುವಂತೆ ಮತ್ತು ಬೀದಿ ದೀಪಗಳ ದುರಸ್ಥಿಯು ಸಂಪೂರ್ಣ ಉಚಿತವಾಗಿದ್ದು, ಯಾರಾದರು ಹಣಕ್ಕೆ ಬೇಡಿಕೆ ಇಟ್ಟಲ್ಲಿ ಈ ಮೇಲಿನ ಸಹಾಯವಾಣಿಗೆ ಕರೆ ಮಾಡಿ ದೂರು ಸಲ್ಲಿಸಲು ಸಾರ್ವಜನಿಕರಲ್ಲಿ ಕೋರಲಾಗಿದೆ.

ಸಾರ್ವಜನಿಕರಿಂದ ಸ್ವೀಕರಿಸಲಾದ ದೂರುಗಳನ್ನು ಸಂಬಧಪಟ್ಟ ಸಿಬ್ಬಂದಿಯ ಮೂಲಕ ಪರಿಶೀಲಿಸಿ, ಸಾಧ್ಯವಾದಷ್ಟು ಶೀಘ್ರವಾಗಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಅಲ್ಲದೆ ಸಾರ್ವಜನಿಕರ ಸಹಕಾರದಿಂದ ಬೆಳಕಿನ ನಗರ-ಸುರಕ್ಷಿತ ರಾಯಚೂರು ನಿರ್ಮಾಣಕ್ಕೆ ಕೈಜೋಡಿಸೋಣ ಎಂದು ರಾಯಚೂರು ಮಹಾನಗರ ಪಾಲಿಕೆಯ ಅಭಿವೃದ್ಧಿ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ನಗರ ಉಪ ವಿಭಾಗ 2ರಲ್ಲಿ ವಿದ್ಯುತ್ ವ್ಯತ್ಯಯ

ರಾಯಚೂರು ಸೆಪ್ಟಂಬರ್ 05 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ 11ಕೆವಿ ತುರ್ತು ಕಾಮಗಾರಿಯ ಪ್ರಯುಕ್ತ ಸೆಪ್ಟಂಬರ್ 06ರ ಮಧ್ಯಾಹ್ನ 3ರಿಂದ ಸಾಯಂಕಾಲ 6ರವರೆಗೆ ಗಂಜ್ ರೋಡ್, ಫೈರ್ ಸ್ಟೇಷನ್, ಕಾಂಗ್ರೆಸ್ ಆಫೀಸ್, ಭಂಡಾರಿ ಆಸ್ಪತ್ರೆ, ಅಭಿರುಚಿ ಹೋಟೆಲ್‌ನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗ್ರಾಹಕರ ನಿರಂತರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532-226386, 08532-231999, 9448395622ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾರ್ಗ ದುರಸ್ತಿ ಹಿನ್ನಲೆಯಲ್ಲಿ ಇಂದು ವಿದ್ಯುತ್ ವ್ಯತ್ಯಯ

ರಾಯಚೂರು ಸೆಪ್ಟಂಬರ್ 05 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರಲ್ಲಿ ಮಾರ್ಗದ ದುರಸ್ತಿ ಹಾಗೂ ಸುಧಾರಣೆ ಕಾಮಗಾರಿಯನ್ನು ನಿರ್ವಹಿಸುವ ಪ್ರಯುಕ್ತ ಸೆಪ್ಟಂಬರ್ 06ರ ಬೆಳಿಗ್ಗೆ 11ರಿಂದ ಸಂಜೆ 5ರವರೆಗೆ ಗದ್ವಾಲ ರೋಡ, ಇಂಡಸ್ಟ್ರೀಯಿಲ್ ಏರಿಯಾ, ವಾಸವಿ ರೈಸ್ ನಿಂದ ಎಮ್.ಆರ್.ಎನ್. ವರೆಗೆ ಅಶ್ವಿನಿ ಕಾಲೋನಿ, ಅಗ್ರಿಗೋಲ್ಡ್, ಮಡ್ಡಿಪೇಟೆ ಎಮ್.ವಿ.ಜಿ. ಲೇಔಟ್, ಮುನ್ನೂರುವಾಡಿ, ಮಡ್ಡಿಪೇಟೆ, ಗದ್ವಾಲ ರೋಡ್, ಜಲಾಲನಗರ, ಬಸವನಭಾವಿ ಸರ್ಕಲ್ ರೈತ ಕಾಲೋನಿ, ಸಿಯಾತಲಾಬ್ ಹೊಸ ಶಿವಂ ಆಸ್ಪತ್ರೆ, ಸುದ್ದಿಮೂಲ, ರತ್ನಗರ್ಭ, ಪೂರ್ಣಿಮಾ ಟಾಕೀಸ್ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗ್ರಾಹಕರ ನಿರಂತರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಅಮೃತ ವಾಣಿ**

**ಬೇರೆಯವರು ಮಾಡಿದ ಮೋಸದಿಂದ ನಾವು ಬುದ್ಧಿವಂತರಾಗುತ್ತೇವೆ.**

**1577 ನೇಯ ದಿನಕ್ಕೆ ಏಮ್ಸ್ ಹೋರಾಟ**

# ಸಾರ್ವಜನಿಕರ ಕುಂದುಕೊರತೆಗಳನ್ನು ಸ್ಥಳದಲ್ಲೇ ಆಲಿಸಿ, ತ್ವರಿತವಾಗಿ ಪರಿಹಾರ: ಡಾ.ಅಜಯ್ ಸಿಂಗ್

ಕೋಟಿ ರೂಪಾಯಿಗಳ ಅನುದಾನವನ್ನು ನಮ್ಮ ಭಾಗಕ್ಕೆ ಹಂಚಿಕೆ ಮಾಡಲಾಗಿದ್ದು, 2023-24ರಲ್ಲಿ 3 ಕೋಟಿ, 2024-25ರಲ್ಲಿ 5 ಕೋಟಿ, 2025-26ರಲ್ಲಿ 5 ಕೋಟಿ ಹಾಗೂ ಪ್ರಸ್ತುತ ಸಾಲಿನಲ್ಲಿ 5 ಕೋಟಿ ರೂ.ಗಳನ್ನು ನೀಡುವ ಮೂಲಕ ನುಡಿದಂತೆ ನಡೆಯುವ ಸರ್ಕಾರದ ಬದ್ಧತೆಯನ್ನು ಇದು ತೋರಿಸುತ್ತದೆ ಎಂದರು.

ಈ ವೇಳೆ ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್.ಭೋಸರಾಜು ಅವರು ಮಾತನಾಡಿ, ರಾಜ್ಯದ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿ ಆದಮೇಲೆ ರಾಜ್ಯದಲ್ಲಿ ಆಡಳಿತ ವಿಭಾಗದಲ್ಲಿ ಬದಲಾವಣೆ ತರಬೇಕು. ಸರ್ಕಾರ ಯೋಜನೆಗಳು, ಸೌಲಭ್ಯಗಳನ್ನು ಜನರಿಗೆ ನೇರವಾಗಿ ತಲುಪಿಸಬೇಕು ಎಂಬ ಉದ್ದೇಶದಿಂದ ಪ್ರಜಾಸೇವೆ ಆಂದೋಲನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ರಾಜ್ಯದ ಜನಸಾಮಾನ್ಯರ ಕುಂದುಕೊರತೆಗಳಿಗೆ ತಕ್ಷಣವೇ ಸ್ಪಂದಿಸುವ ಮತ್ತು ಅವರ ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಹರಿಸುವ ಮಹತ್ವಾಕಾಂಕ್ಷೆಯ ಜನಪರ ಆಡಳಿತಕ್ಕೆ ರಾಜ್ಯ ಸರ್ಕಾರ ಮತ್ತಷ್ಟು ಒತ್ತು ನೀಡಿದೆ. ನೆರೆಯ ಬಳ್ಳಾರಿ ಜಿಲ್ಲೆಯ ಕೂಡ್ಲಿಗಿಯಲ್ಲಿ ಈಗಾಗಲೇ ಯಶಸ್ವಿಯಾಗಿ ಸಿ.ಎಂ ಅವರು ಈ ವಿನೂತನ ಕಾರ್ಯಕ್ರಮಕ್ಕೆ ಚಾಲನೇ ನೀಡಿದ್ದು ಇದು ರಾಜ್ಯಾದ್ಯಂತ ವಿಸ್ತರಿಸಿ ಅನುಷ್ಠಾನಗೊಳಿಸಲಾಗುತ್ತಿದೆ ಮಾನ್ವಿಯಲ್ಲಿ ಇಂದು ಈ ಕಾರ್ಯಕ್ರಮಕ್ಕೆ ಚಾಲನೇ ನೀಡಿದ್ದೆವೆ ಎಂದರು.

ರಾಜ್ಯಮಟ್ಟದಲ್ಲಿ ಆಡಳಿತ ವ್ಯವಸ್ಥೆಯನ್ನು ಇನ್ನಷ್ಟು ಸರಳಗೊಳಿಸುವ ಮತ್ತು ಜನರ ಮನೆಬಾಗಿಲಿಗೇ ಸರ್ಕಾರಿ ಸೇವೆಗಳನ್ನು ತಲುಪಿಸುವ ಉದ್ದೇಶದಿಂದ ಈ ಮಹತ್ವದ ಹೆಜ್ಜೆಯನ್ನು ಇಡಲಾಗಿದೆ. ಕೇವಲ ಪ್ರಚಾರಕ್ಕೆ ಸೀಮಿತವಾಗದೆ, ಆಡಳಿತ ಯಂತ್ರದ ಪ್ರಾಮಾಣಿಕತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳನ್ನು ಈ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳಲಾಗಿದೆ ಎಂದರು.

ಕೊನೆಯ ಭಾಗದ ರೈತರಿಗೆ ನೀರು ಹರಿಸಲು ಜಿಲ್ಲಾಧಿಕಾರಿಗಳ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಅದಕ್ಕಾಗಿ ಇತ್ತೀಚೆಗೆ ಪ್ರಾದೇಶಿಕ ಆಯುಕ್ತ ನೇತೃತ್ವದಲ್ಲಿ ರೈತರೊಂದಿಗೆ ಸಭೆ ಮಾಡಿ, ರೈತರ ಬೆಂಬಲಕ್ಕೆ ನಿಂತಿದ್ದಾರೆ. ಅವರಿಗೆ ರೈತರು ಸಹಕರಿಸಿಬೇಕು ಎಂದರು.

ಜನರ ಕಷ್ಟ-ನಷ್ಟಗಳಿಗೆ ತಕ್ಷಣ ಪರಿಹಾರ ಸಿಗಬೇಕೆಂಬುದು ಇದರ ಮುಖ್ಯ ಉದ್ದೇಶವಾಗಿದೆ. ಜನರ ಬೇಡಿಕೆ ಏನಿರುತ್ತದೆಯೋ ಆ ಬೇಡಿಕೆಗೆ ಸರಿಯಾದ ರೀತಿಯಲ್ಲಿ ಪರಿಹಾರ ಸಿಗಬೇಕು, ಅದು ನಿಗದಿತ ಸಮಯದಲ್ಲಿ ಸಿಗಬೇಕೆಂಬ ಒಂದು ಉದ್ದೇಶದಿಂದ ಈ ಯೋಜನೆಗೆ ಬಹಳಷ್ಟು ಮಹತ್ವವಾದಂತಹ ಪ್ರಯತ್ನ ಮಾಡಿ, ಅನೇಕ ಅಧಿಕಾರಿಗಳ ಜೊತೆಯಲ್ಲಿ, ಜನಪ್ರತಿನಿಧಿಗಳ ಜೊತೆಯಲ್ಲಿ ಚರ್ಚೆ ಮಾಡಿ, ಈ ಯೋಜನೆ ಜಾರಿಗೆ ತರತಕ್ಕಂತಹ ಒಂದು ಪ್ರಯತ್ನ ಮುಖ್ಯಮಂತ್ರಿಗಳು ಮಾಡುತ್ತಿದ್ದಾರೆ ಎಂದರು.

ಮಲ್ಲಿಕಾರ್ಜುನ ಖರ್ಗೆ ಹಾಗೂ ದಿವಂಗತ ಧರ್ಮಸಿಂಗ್ ಅವರ ಶ್ರಮದಿಂದ ಈ ಭಾಗದಲ್ಲಿ 371 ಜೆ ಜಾರಿಗೆ ಬಂದಿದೆ. ಮೊದಲು ಈ ಭಾಗದಲ್ಲಿ ಕ್ಲಾಸ್ ಒನ್ ಆಫೀಸರ್ ಕಡಿಮೆ ಸಂಖ್ಯೆಯಲ್ಲಿ ಸಿಗುತ್ತಿದ್ದರು. ಆದರೆ 371 ಜೆ ಕಲಂ ಜಾರಿಯಾದ ನಂತರ ಈ ಭಾಗದಲ್ಲಿ ಆನೇಕ ಕ್ಲಾಸ್ ಒನ್ ಆಫೀಸರ್ ಸಿಗುತ್ತಾರೆ. ಅಲ್ಲದೆ ಅನೇಕರು ಸರ್ಕಾರಿ ಹುದ್ದೆಗೆ ಆಯ್ಕೆಯಾಗಿದೆ ಎಂದರು.

ಮಾನ್ವಿ ಶಾಸಕ ಹಂಪಯ್ಯ ನಾಯಕ ಅವರು ಮಾತನಾಡಿ, ಅಭಿವೃದ್ಧಿ, ಕೆಲಸ ಕಾರ್ಯಗಳು ಎಲ್ಲರಿಗೂ ಸಿಗಬೇಕು. ಮಾನ್ವಿಯಲ್ಲಿ ಬರದ ಛಾಯೆ ನಿರ್ಮಾಣವಾಗಿದ್ದು, ದನಕರುಗಳಿಗೆ ಕುಡಿಯಲು ನೀರು ಇಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಬಿತ್ತನೆ ಮಾಡಿದ ಬೆಳೆಗಳು ನೀರು ಇಲ್ಲದೆ. ಬಾಡುತ್ತಿವೆ ಕೂಡಲೇ ಎರಡನೇ ಪಟ್ಟಿಯಲ್ಲಿ ಮಾನ್ವಿ ತಾಲೂಕನ್ನು ಬರ ತಾಲೂಕು ಎಂದು ಘೋಷಣೆ ಮಾಡಬೇಕು. ಅಲ್ಲದೆ ಮುಂದಿನ ದಿನಗಳಲ್ಲಿ ಕ್ಷೇತ್ರಕ್ಕೆ ಅಭಿವೃದ್ಧಿ ಕೆಲಸ ಕಾರ್ಯಗಳನ್ನು ಮುಂದುವರಿಸಬೇಕು. ಜನರು ತಮ್ಮ ಅಹವಾಲುಗಳನ್ನು ಲಿಖಿತ ರೂಪದಲ್ಲಿ ಮನವಿ ನೀಡಿ, ತಮ್ಮ ಸಮಸ್ಯೆ ಬಗೆಹರಿಸಿಕೊಳ್ಳಬೇಕು. ಸ್ಥಳದಲ್ಲಿಯೇ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದಾರೆ. ಜನರು ಇದರ ಸದುಪಯೋಗ ಪಡೆಯಬೇಕು ಎಂದರು.

ಇದೇ ಸಂದರ್ಭದಲ್ಲಿ ಮಾನ್ವಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಗಫೂರ್‌ಸಾಬ್, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಿ.ಕೆ.ಅಮರೇಶ, ಮಾನ್ಯ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಎಸ್.ಎಸ್.ನಕುಲ್, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ , ಮಾನ್ವಿ ತಹಶಿಲ್ದಾರ್ ಭೀಮರಾಯ ರಾಮಸಮುದ್ರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ವಿವಿಧ ಗ್ರಾಮಗಳಿಂದ ಆಗಮಿಸಿದ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಪ್ರಜಾಸೇವೆ ಆಂದೋಲನ ಕಾರ್ಯಕ್ರಮದಲ್ಲಿ ಗಮನ ಸೆಳೆದ ವಿವಿಧ ಮಳಿಗೆಗಳು ಜಿಲ್ಲಾ ಉಸ್ತುವಾರಿಂದ ಚಾಲನೆ

ಅರ್ಜಿ ಪಡೆಯಲು ವಿಶೇಷ ಕೌಂಟರ್: ಜಿಲ್ಲೆಯ ಮಾನ್ವಿ ಪಟ್ಟಣದ ಭಾಷುಮಿಯ ಸಾಹುಕಾರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಸಭೆಯ ಅಂಗವಾಗಿ, ಸಾರ್ವಜನಿಕರಿಂದ ಅಹವಾಲು ಪಡೆಯಲು, ಅರ್ಜಿದಾರರಿಗೆ ಸ್ವೀಕೃತಿ ನೀಡುವ ಸಲುವಾಗಿ ವಿಶೇಷ ಕೌಂಟರ್‌ಗಳನ್ನು ಇಲಾಖಾವಾರು ತೆರೆದು ಸಾರ್ವಜನಿರಿಗೆ ಅನುಕೂಲ ಕಲ್ಪಿಸಿಕೊಡಲಾಗಿತ್ತು.

ಶಿಕ್ಷಕರ ದಿನಾಚರಣೆ ಅಂಗವಾಗಿ ಡಾ. ರಾಧಾಕೃಷ್ಣನ್ ಅವರಿಗೆ ಗೌರವ ಸಮರ್ಪಣೆ: ಭಾರತದ ಮೊದಲ ಉಪರಾಷ್ಟಪತಿ ಡಾ. ರಾಧಾಕೃಷ್ಣನ್ ಅವರ ಜನ್ಮ ದಿನವಾದ ಸೆಪ್ಟಂಬರ್ 05ರ ದಿನವನ್ನು ಶಿಕ್ಷಕರ ದಿನಾಚರಣೆಯಾಗಿ ಆಚರಿಸಲಾಗುತ್ತಿದ್ದು, ಇದರ ಅಂಗವಾಗಿ ಮಾನ್ವಿ ಪಟ್ಟಣದ ಭಾಷುಮಿಯ ಸಾಹುಕಾರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಏರ್ಪಡಿಸಿದ ಪ್ರಜಾಸೇವಾ ಸಭೆಯ ಸಂದರ್ಭದಲ್ಲಿ ಡಾ. ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ವೇದಿಕೆಯಲ್ಲಿದ್ದ ಎಲ್ಲ ಗಣ್ಯಮಾನ್ಯರು ಪುಷ್ಪನಮನ ಸಲ್ಲಿಸಿ, ಗೌರವ ಸಮರ್ಪಿಸಿದರು.

ಸಚಿವರಿಗೆ ಅದ್ದೂರಿ ಸ್ವಾಗತ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ರಾಯಚೂರು ಇವರ ವತಿಯಿಂದ ತಾಲೂಕು ಮಟ್ಟದ ಪ್ರಜಾಸೇವೆ ಆಂದೋಲನ -2026ರ ಕಾರ್ಯಕ್ರಮದಲ್ಲಿ ಭಾಗವಹಿಸಲು ಮಾನ್ವಿ ಪಟ್ಟಣಕ್ಕೆ ಆಗಮಿಸಿದ ಜಿಲ್ಲಾ ಉಸ್ತುವಾರಿ ಸಚಿವರಿಗೆ ಡೊಳ್ಳು ಸೇರಿದಂತೆ ವಿವಿಧ ವಾದ್ಯಗಳೊಂದಿಗೆ ಮಾನ್ವಿಯ ಮುಖ್ಯ ರಸ್ತೆಯಿಂದ ಮಾನ್ವಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಸ್ಥಾಪಿಸಲಾಗಿದ್ದ ಮುಖ್ಯ ವೇದಿಕೆಗೆ ಸಚಿವರನ್ನು ಕರೆತರಲಾಯಿತು.

ಈ ವೇಳೆ ಎನ್.ಸಿ.ಸಿ ವಿದ್ಯಾರ್ಥಿಗಳಿಂದ ಶಿಸ್ತು ಬದ್ಧವಾಗಿ ಪಥ ಸಂಚಲನ ಮಾಡಿದರು.

ಇದೇ ಸಂದರ್ಭದಲ್ಲಿ ಮಾನ್ವಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಗಫೂರ್‌ಸಾಬ್, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಿ.ಕೆ.ಅಮರೇಶ, ಮಾನ್ಯ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಎಸ್.ಎಸ್.ನಕುಲ್, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಮಾನ್ವಿ ತಹಶಿಲ್ದಾರ್ ಭೀಮರಾಯ ರಾಮಸಮುದ್ರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ವಿವಿಧ ಗ್ರಾಮಗಳಿಂದ ಆಗಮಿಸಿದ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ದೌರ್ಜನ್ಯ ಪ್ರಕರಣಗಳ ಸಂತ್ರಸ್ತ ಕುಟುಂಬಗಳಿಗೆ ಸಮಗ್ರ ಪುನರ್ವಸತಿ ಕಲ್ಪಿಸಿ: ಮಹೇಂದ್ರ ಕುಮಾರ್ ಮಿತ್ರ

ಮತ್ತು ಅನುಸೂಚಿತ ಪಂಗಡಗಳ ಮೇಲಿನ ದೌರ್ಜನ್ಯ ಪ್ರತಿಬಂಧ ಅಧಿನಿಯಮ-1989ರಡಿ ರಚಿಸಲಾಗುವ ಜಿಲ್ಲಾ ಮಟ್ಟದ ಜಾಗೃತದಳ ಮತ್ತು ಮೇಲ್ವಿಚಾರಣಾ ಸಮಿತಿಯಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ಐವರು ಸರ್ಕಾರೇತರ ಸದಸ್ಯರನ್ನು ನೇಮಕ ಮಾಡಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಒತ್ತಾಯಿಸಿದರು.

ಸಮಿತಿಯಲ್ಲಿ ಸ್ಥಾನ ಪಡೆಯುವವರಿಗೆ ಭಾರತೀಯ ಸಂವಿಧಾನ, ಭೂ ಸುಧಾರಣೆ ಕಾಯ್ದೆ, ಭೂ ಮಂಜೂರಾತಿ ನಿಯಮಗಳು, ಪಿಟಿಸಿಎಲ್ ಕಾಯ್ದೆ, ಜೀತ ಪದ್ಧತಿ ನಿರ್ಮೂಲನಾ ಕಾಯ್ದೆ, ದೌರ್ಜನ್ಯ ಪ್ರತಿಬಂಧ ಕಾಯ್ದೆ ಹಾಗೂ ನಾಗರಿಕ ಹಕ್ಕುಗಳ ಸಂರಕ್ಷಣಾ ಕಾಯ್ದೆಗಳ ಕುರಿತು ಸಮರ್ಪಕ ಅರಿವು ಮತ್ತು ಕಾನೂನು ಜ್ಞಾನ ಇರಬೇಕು. ಕೇವಲ ನಾಮಮಾತ್ರದ ನೇಮಕಾತಿ ಮಾಡದೆ, ಸಂತ್ರಸ್ತರಿಗೆ ನ್ಯಾಯ ಒದಗಿಸುವ ಸಾಮರ್ಥ್ಯ ಹೊಂದಿರುವವರನ್ನು ಆಯ್ಕೆ ಮಾಡಬೇಕು ಎಂದು ಹೇಳಿದರು.

ಸಂವಿಧಾನದ ಅನುಚ್ಛೇದ 46ರ ಆಶಯದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಶೈಕ್ಷಣಿಕ ಹಾಗೂ ಆರ್ಥಿಕ ಹಿತಾಸಕ್ತಿಗಳನ್ನು ಸರ್ಕಾರ ವಿಶೇಷ ಕಾಳಜಿಯಿಂದ ರಕ್ಷಿಸಬೇಕು. ದೌರ್ಜನ್ಯ ಪ್ರಕರಣಗಳಲ್ಲಿ ಮೃತಪಟ್ಟವರ ವಿಧವೆ ಅಥವಾ ಇತರ ಅವಲಂಬಿತರಿಗೆ ಮಾಸಿಕ ಪಿಂಚಣಿ ನೀಡಬೇಕು. 1990ರಿಂದ ಇದುವರೆಗೆ ಅರ್ಹರಾಗಿದ್ದರೂ ಸೌಲಭ್ಯಗಳಿಂದ ವಂಚಿತರಾದ ಕುಟುಂಬಗಳ ಪ್ರಕರಣಗಳನ್ನು ಮರುಪರಿಶೀಲಿಸಿ ಬಾಕಿ ಸೌಲಭ್ಯಗಳನ್ನು ತಲುಪಿಸಬೇಕು ಎಂದು ಒತ್ತಾಯಿಸಿದರು.

ದೌರ್ಜನ್ಯ ಪ್ರಕರಣಗಳಲ್ಲಿ ಜೀವ ಕಳೆದುಕೊಂಡವರ ಕುಟುಂಬದ ಸದಸ್ಯರಿಗೆ ಅನುಕಂಪದ ಆಧಾರದ ಮೇಲೆ ಸರ್ಕಾರಿ ಉದ್ಯೋಗ ದೊರೆಯುವಂತೆ ಅಗತ್ಯ ಕಾನೂನು ತಿದ್ದುಪಡಿ ಕೈಗೊಳ್ಳಬೇಕು. ಕರ್ನಾಟಕ ನಾಗರಿಕ ಸೇವೆಗಳ ವಿಶೇಷ ನಿಯಮಗಳಲ್ಲಿ ಉದ್ಯೋಗ ನೀಡಲು ಅಡ್ಡಿಯಾಗುವ ಅಂಶಗಳಿದ್ದರೆ ಅವುಗಳನ್ನು ಮರುಪರಿಶೀಲಿಸಿ ಅರ್ಹರಿಗೆ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಅದೇ ರೀತಿ ಸಂತ್ರಸ್ತ ಕುಟುಂಬಗಳಿಗೆ ನಿಯಮಾನುಸಾರ ಕೃಷಿ ಭೂಮಿ ಹಾಗೂ ಅಗತ್ಯವಿದ್ದಲ್ಲಿ ವಸತಿ ಸೌಲಭ್ಯ ಕಲ್ಪಿಸಬೇಕು. ಮೃತರ ಮಕ್ಕಳಿಗೆ ಪದವಿ ಹಂತದವರೆಗೆ ಶಿಕ್ಷಣ ಮತ್ತು ನಿರ್ವಹಣಾ ವೆಚ್ಚವನ್ನು ಸರ್ಕಾರವೇ ಭರಿಸಬೇಕು. ಹೆಣ್ಣುಮಕ್ಕಳ ವಿವಾಹಕ್ಕೂ ಅಗತ್ಯ ಆರ್ಥಿಕ ನೆರವು ಒದಗಿಸಬೇಕು ಎಂದು ಹೇಳಿದರು.

ದೌರ್ಜನ್ಯ ಪ್ರತಿಬಂಧ ಕಾಯ್ದೆಯ ಅನುಷ್ಠಾನದಲ್ಲಿ ಕರ್ತವ್ಯ ಲೋಪ ಎಸಗುವ ಸಾರ್ವಜನಿಕ ನೌಕರರ ವಿರುದ್ಧವೂ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕು. ಪ್ರಕರಣಗಳ ತನಿಖೆ, ಚಾರ್ಜ್‌ಶೀಟ್ ಹಾಗೂ ನ್ಯಾಯಾಂಗ ಪ್ರಕ್ರಿಯೆಯಲ್ಲಿ ಯಾವುದೇ ವಿಳಂಬ ಅಥವಾ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು ಎಂದು ಹೇಳಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಭೂಮಿಯನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿರುವ ಪ್ರಕರಣಗಳಲ್ಲಿ ಪೊಲೀಸರು ಅವುಗಳನ್ನು ಕೇವಲ ಸಿವಿಲ್ ವಿವಾದ ಎಂದು ಪರಿಗಣಿಸಿ ಹಿಂಬರಹ ನೀಡಬಾರದು. ಪ್ರಕರಣದ ಸ್ವರೂಪಕ್ಕೆ ಅನುಗುಣವಾಗಿ ಅನ್ವಯಿಸುವ ಕಾಯ್ದೆಗಳಡಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ದೌರ್ಜನ್ಯ ಪ್ರಕರಣಗಳ ತನಿಖೆ ಪೂರ್ಣಗೊಂಡ ಬಳಿಕ ಸಂತ್ರಸ್ತರ ಪರವಾಗಿ ಸಮರ್ಥವಾಗಿ ವಾದಿಸಲು ಅರ್ಹ ವಕೀಲರಿಗೆ ಅವಕಾಶ ಕಲ್ಪಿಸಬೇಕು. ದೂರು ದಾಖಲಿಸಿದ ನಂತರ ಸೂಕ್ತ ಕಾರಣವಿಲ್ಲದೆ ಬಿ-ರಿಪೋರ್ಟ್ ಸಲ್ಲಿಸುವ ಪ್ರವೃತ್ತಿಗೆ ಕಡಿವಾಣ ಹಾಕಬೇಕು. ದೌರ್ಜನ್ಯ ಪ್ರಕರಣಗಳ ಮೇಲ್ವಿಚಾರಣೆಗೆ ಪ್ರತಿ ಜಿಲ್ಲೆಯಲ್ಲಿ ವಿಶೇಷ ಜಿಲ್ಲಾಧಿಕಾರಿ ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳನ್ನು ನೇಮಿಸುವ ವ್ಯವಸ್ಥೆ ರೂಪಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿರುವ ಎಲ್ಲ ದೇವಸ್ಥಾನಗಳಲ್ಲಿ ಪರಿಶಿಷ್ಟ ಜಾತಿಯ ಜನರಿಗೆ ಯಾವುದೇ ಭೇದಭಾವವಿಲ್ಲದೆ ಸಮಾನ ಪ್ರವೇಶ ಕಲ್ಪಿಸಬೇಕು. ದೇವಸ್ಥಾನ ಪ್ರವೇಶ ಸೇರಿದಂತೆ ಸಂವಿಧಾನಬದ್ಧ ನಾಗರಿಕ ಹಕ್ಕುಗಳನ್ನು ಎಲ್ಲರಿಗೂ ಸಮಾನವಾಗಿ ಜಾರಿಗೊಳಿಸಬೇಕು ಎಂದು ಹೇಳಿದರು.

1932ರ ಪೂನಾ ಒಪ್ಪಂದದ ನಂತರವೂ ಅಸ್ಪೃಶ್ಯತೆ ಸಂಪೂರ್ಣವಾಗಿ ನಿರ್ಮೂಲನೆಯಾಗಿಲ್ಲ ಎಂದು ಆರೋಪಿಸಿದ ಮಹೇಂದ್ರ ಕುಮಾರ್ ಮಿತ್ರ, ಪರಿಶಿಷ್ಟ ಜಾತಿಯವರ ಮೇಲಿನ ದೌರ್ಜನ್ಯ ಹಾಗೂ ಕಾಂಗ್ರೆಸ್ ಪಕ್ಷದ ಐತಿಹಾಸಿಕ ನೀತಿಗಳ ಕುರಿತು ಬಹಿರಂಗ ಚರ್ಚೆಗೆ ತಾವು ಸಿದ್ಧರಿರುವುದಾಗಿ ಹೇಳಿದರು. ಡಾ. ಬಿ.ಆರ್. ಅಂಬೇಡ್ಕರ್ ಅವರ ವಿಚಾರಧಾರೆ ಮತ್ತು ಕಾಂಗ್ರೆಸ್‌ನ ಐತಿಹಾಸಿಕ ನಿಲುವುಗಳ ಕುರಿತು ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಯಾವುದೇ ನಾಯಕರು ಚರ್ಚೆಗೆ ಬರಬಹುದು ಎಂದು ಸವಾಲು ಹಾಕಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರ ಸಂವಿಧಾನಬದ್ಧ ಹಕ್ಕುಗಳ ರಕ್ಷಣೆ, ದೌರ್ಜನ್ಯ ತಡೆ ಹಾಗೂ ಸಂತ್ರಸ್ತ ಕುಟುಂಬಗಳ ಪುನರ್ವಸತಿಗೆ ಸರ್ಕಾರ ತ್ವರಿತ ಮತ್ತು ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಮಹೇಂದ್ರ ಕುಮಾರ್ ಮಿತ್ರ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಅಶೀಶ್ ಅದೋನಿ, ನರಸಿಂಹ ಹಾಗೂ ಎಡ್ಡಪ್ಪ ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಸಾಲ ಮರುಪಾವತಿ ಒತ್ತಡಕ್ಕೆ ಮಹಿಳೆ ಅಪಹರಣ: ನಾಲ್ಕು ದಿನ ಅಕ್ರಮ ಬಂಧನ

ಪಡೆದಿದ್ದರು. ಆರ್ಥಿಕ ಸಂಕಷ್ಟದಿಂದಾಗಿ ಇತ್ತೀಚಿನ ಕೆಲವು ವಾರಗಳಿಂದ ಕಂತು ಪಾವತಿಸಲು ಸಾಧ್ಯವಾಗಿರಲಿಲ್ಲ ಎನ್ನಲಾಗಿದೆ.

ಆಗಸ್ಟ್ 27ರಂದು ಕೆಲಸ ಹಾಗೂ ಹಣ ನೀಡುವುದಾಗಿ ಹೇಳಿ ನಜತ್ ಬೇಗಂ ಅವರು ಮಹಿಳೆಯನ್ನು ಮೆಟ್ರೋ ಲೇಔಟ್‌ನಲ್ಲಿರುವ ತಮ್ಮ ಮನೆಗೆ ಕರೆಸಿಕೊಂಡಿದ್ದರು. ಸಂಜೆ ಸುಮಾರು 5.30ಕ್ಕೆ ಮಹಿಳೆ ತನ್ನ ಅಪ್ರಾಪ್ತ ಮಗನೊಂದಿಗೆ ಅಲ್ಲಿಗೆ ತೆರಳಿದ್ದ ವೇಳೆ ರೇಷ್ಮಾ ಬಾನು, ಆಕೆಯ ಪತಿ ಸುಹೇಲ್ ಹಾಗೂ ಮತ್ತಿತರರು ಮನೆಗೆ ಬಂದು ಬಾಗಿಲು ಹಾಕಿ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ.

ಬಡ್ಡಿ ಸೇರಿದಂತೆ ₹11 ಲಕ್ಷ ನೀಡುವಂತೆ ಒತ್ತಾಯಿಸಿ ಚಾಕುವಿನಿಂದ ಬೆದರಿಕೆ ಹಾಕಲಾಗಿದೆ. ಮಹಿಳೆಯ ಮೊಬೈಲ್ ಫೋನ್ ಕಸಿದುಕೊಂಡು ಹಾನಿಗೊಳಿಸಲಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ನಂತರ ಸಂಜೆ ಸುಮಾರು 7ರ ವೇಳೆಗೆ ಮಹಿಳೆ ಹಾಗೂ ಆಕೆಯ ಮಗುವನ್ನು ಬಲವಂತವಾಗಿ ಆಟೋದಲ್ಲಿ ಕುಳ್ಳಿರಿಸಿ ಕುಂಬಳಗೋಡಿನ ಮನೆಯೊಂದಕ್ಕೆ ಕರೆದೊಯ್ಯಲಾಗಿದೆ. ಅಲ್ಲಿ ದೊಣ್ಣೆಯಿಂದ ಹೊಡೆದು, ಅವಾಚ್ಯವಾಗಿ ನಿಂದಿಸಿ, ಮನೆಯ ಒಂದು ಕೋಣೆಯಲ್ಲಿ ಕೂಡಿಹಾಕಲಾಗಿದೆ ಎಂದು ಮಹಿಳೆ ದೂರಿದ್ದಾರೆ.

ಆಗಸ್ಟ್ 29ರಂದು ಆರೋಪಿಗಳು ಮಹಿಳೆಯನ್ನು ಬಲವಂತವಾಗಿ ಬಟ್ಟೆ ಬಿಚ್ಚಿಸಿ ಮೊಬೈಲ್‌ನಲ್ಲಿ ವಿಡಿಯೋ ಮಾಡಿದ್ದಾರೆ. ಹಣ ಪಾವತಿಸದಿದ್ದರೆ ವಿಡಿಯೋವನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುವುದಾಗಿ ಬೆದರಿಕೆ ಹಾಕಿದ್ದಾರೆ ಎಂಬ ಗಂಭೀರ ಆರೋಪವೂ ಎಫ್‌ಐಆರ್‌ನಲ್ಲಿ ದಾಖಲಾಗಿದೆ. ಹಣ ವಸೂಲಿಗಾಗಿ ವೇಶ್ಯಾವಾಟಿಕೆಗೆ ತಳ್ಳುವುದಾಗಿ ಸುಹೇಲ್ ಬೆದರಿಕೆ ಹಾಕಿದ್ದಾನೆ ಎಂದು ಮಹಿಳೆ ಆರೋಪಿಸಿದ್ದಾರೆ.

ಅದೇ ದಿನ ಮಹಿಳೆಯ ಹಿರಿಯ ಮಗನನ್ನು ಆಕೆಯ ತಾಯಿಯ ಮನೆಗೆ ಕಳುಹಿಸಲಾಗಿದ್ದು, ಮಹಿಳೆಯನ್ನು ಮಾತ್ರ ಅಲ್ಲಿಯೇ ಬಂಧನದಲ್ಲಿಟ್ಟಿದ್ದರು ಎಂದು ದೂರಿನಲ್ಲಿ ಹೇಳಲಾಗಿದೆ.

ಆಗಸ್ಟ್ 30ರಂದು ಮಹಿಳೆಯನ್ನು ಸಿಟಿ ಮಾರ್ಕೆಟ್ ಸಮೀಪದ ವಕೀಲರೊಬ್ಬರ ಬಳಿಗೆ ಕರೆದೊಯ್ದು ಕೆಲವು ದಾಖಲೆಗಳಿಗೆ ಸಹಿ ಹಾಕಿಸಿಕೊಂಡು ಮತ್ತೆ ಕರೆತಂದಿದ್ದಾರೆ ಎನ್ನಲಾಗಿದೆ.

ಆಗಸ್ಟ್ 31ರ ಮಧ್ಯಾಹ್ನ ಶೌಚಾಲಯಕ್ಕೆ ಹೋಗಲು ಮಹಿಳೆಗೆ ಬಾಗಿಲು ತೆರೆದ ಸಂದರ್ಭದಲ್ಲಿ, ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಆಗಮಿಸಿ ಆಕೆಯನ್ನು ರಕ್ಷಿಸಿದ್ದಾರೆ. ಬಳಿಕ ಚಂದ್ರ ಲೇಔಟ್ ಪೊಲೀಸ್ ಠಾಣೆಗೆ ಕರೆತಂದು ದೂರು ದಾಖಲಿಸಿಕೊಂಡಿದ್ದಾರೆ.

ಪ್ರಕರಣದಲ್ಲಿ ನಜತ್ ಬೇಗಂ (ಎ1), ರೇಷ್ಮಾ ಬಾನು (ಎ2), ಸುಹೇಲ್ (ಎ3) ಹಾಗೂ ಸೈಫ್ (ಎ4) ಅವರನ್ನು ಆರೋಪಿಗಳೆಂದು ಗುರುತಿಸಲಾಗಿದೆ. ಪ್ರಕರಣದ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಬಿಜೆಪಿ ಪಾದಯಾತ್ರೆ ಹತಾಶೆಯ ಪ್ರತಿಫಲ: ಸಚಿವ ಡಾ. ಅಜಯ್ ಸಿಂಗ್ ಟೀಕೆ

ನಾಯಕರು ಕಾಣಿಸಿಕೊಂಡಿದ್ದರೂ ನಂತರ ಅನೇಕರು ದೂರ ಉಳಿದಿದ್ದಾರೆ. ರಾಜ್ಯಮಟ್ಟದ ಪ್ರಮುಖ ನಾಯಕರ ಗೈರುಹಾಜರಿ ಬಿಜೆಪಿಯ ಒಳಗಿನ ಅಸಮಾಧಾನ ಮತ್ತು ವಿಭಜನೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಕಾಂಗ್ರೆಸ್ ಸರ್ಕಾರವು ಜನಪರ ಆಡಳಿತಕ್ಕೆ ಆದ್ಯತೆ ನೀಡುತ್ತಿದ್ದು, ಯಾವುದೇ ರಾಜಕೀಯ ಒತ್ತಡಕ್ಕೆ ಮಣಿದಿಲ್ಲ. ಉದ್ಯಾನವನಕ್ಕೆ ಸಂಬಂಧಿಸಿದ ಮಸೂದೆಯನ್ನು ಸಾರ್ವಜನಿಕರ ಅಭಿಪ್ರಾಯವನ್ನು ಪರಿಗಣಿಸಿ ಕೈಬಿಡಲಾಗಿದೆ. ರೈತರ ಸಂಕಷ್ಟವನ್ನು ಗಮನದಲ್ಲಿಟ್ಟುಕೊಂಡು ಇನ್ನೂ ಕೆಲವು ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಲಾಗಿದೆ. ಇದೇ ತಿಂಗಳಲ್ಲಿ ಎರಡು ದಿನಗಳ ಅಧಿವೇಶನ ನಡೆಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ಜನರ ಸಮಸ್ಯೆಗಳನ್ನು ಕಚೇರಿಗಳಲ್ಲಿ ಬಾಕಿ ಉಳಿಸದೆ ಅವರ ಬಳಿಗೆ ತೆರಳಿ ಪರಿಹಾರ ನೀಡುವ ಉದ್ದೇಶದಿಂದ ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಉಸ್ತುವಾರಿ ಸಚಿವರ ನೇತೃತ್ವದಲ್ಲಿ, ಆಯಾ ಕ್ಷೇತ್ರದ ಶಾಸಕರು ಹಾಗೂ ಅಧಿಕಾರಿಗಳೊಂದಿಗೆ ಜನಸಂಪರ್ಕ ಕಾರ್ಯಕ್ರಮ ನಡೆಸಲಾಗುತ್ತಿದೆ. ಸಾರ್ವಜನಿಕರ ಅಹವಾಲುಗಳನ್ನು ನೇರವಾಗಿ ಸ್ವೀಕರಿಸಿ ಸ್ಥಳದಲ್ಲಿಯೇ ಪರಿಹಾರ ಕಲ್ಪಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದರು.

ಬಿಜೆಪಿಯವರು ರಾಜಕೀಯ ಹತಾಶೆಯಿಂದ ಪಾದಯಾತ್ರೆ ನಡೆಸುತ್ತಿದ್ದರೂ ಕಾಂಗ್ರೆಸ್ ಸರ್ಕಾರ ತನ್ನ ಜನಪರ ಕಾರ್ಯಕ್ರಮಗಳನ್ನು ನಿಲ್ಲಿಸುವುದಿಲ್ಲ. ಸರ್ಕಾರದ ಅಭಿವೃದ್ಧಿ ಕಾರ್ಯಗಳು ಮತ್ತು ಜನಪರ ಯೋಜನೆಗಳನ್ನು ಸಹಿಸಿಕೊಳ್ಳಲಾಗದೆ ಬಿಜೆಪಿ ನಾಯಕರು ರಾಜಕೀಯವಾಗಿ ವಿರೋಧ ವ್ಯಕ್ತಪಡಿಸುತ್ತಿದ್ದಾರೆ ಎಂದು ಅವರು ಟೀಕಿಸಿದರು.

ಬರ ಪರಿಸ್ಥಿತಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಜಿಲ್ಲಾವಾರು ಪರಿಶೀಲನೆಗಾಗಿ ಸಚಿವರನ್ನು ನಿಯೋಜಿಸಲಾಗಿದೆ. ತಾವು ಕೂಡ ರಾಯಚೂರು ಜಿಲ್ಲೆಯ ವಿವಿಧ ತಾಲೂಕುಗಳಿಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿ ಸರ್ಕಾರಕ್ಕೆ ವರದಿ ಸಲ್ಲಿಸಿದ್ದಾಗಿ ಡಾ. ಅಜಯ್ ಧರ್ಮಸಿಂಗ್ ತಿಳಿಸಿದರು.

ಸರ್ಕಾರ ಆರಂಭದಿಂದಲೂ ಬರ ಪರಿಸ್ಥಿತಿಯನ್ನು ನಿಭಾಯಿಸಲು ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ. ಕ್ಷೇತ್ರಮಟ್ಟದ ಪರಿಶೀಲನೆ ಮತ್ತು ವರದಿಗಳ ಆಧಾರದ ಮೇಲೆ ರಾಯಚೂರು ಜಿಲ್ಲೆಯ ಎಲ್ಲಾ ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು, ಕಾಂಗ್ರೆಸ್ ಹಿರಿಯ ಮುಖಂಡರಾದ ಕೆ. ಶಾಂತಪ್ಪ, ಜಯಣ್ಣ ಸೇರಿದಂತೆ ಅನೇಕ ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

# ಶಿಕ್ಷಕರು ಸಮಾಜದ ಸಾಧನೆಗೆ ಮಾರ್ಗದರ್ಶಕರು: ಡಾ.ಅಜಯ್ ಸಿಂಗ್

ಜೀವನದಲ್ಲಿ ಯಾವುದೇ ಸಾಧನೆಯನ್ನು ಮಾಡಬಹುದು ಎಂದು ಸಚಿವರು ತಿಳಿಸಿದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ನೀಡಿದ ಶಿಕ್ಷಣ, ಸಂಘಟನೆ ಮತ್ತು ಹೋರಾಟ ಎಂಬ ಸಂದೇಶವನ್ನು ಉಲ್ಲೇಖಿಸಿದ ಅವರು, ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುವ ಅಗತ್ಯವಿದೆ ಎಂದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ, ಶಿಕ್ಷಣ ಕ್ಷೇತ್ರಕ್ಕೆ ವಿಶೇಷ ಒತ್ತು ನೀಡಲಾಗಿದೆ. ಕಲ್ಯಾಣ ಕರ್ನಾಟಕದಲ್ಲಿ ಪ್ರತಿ ವರ್ಷ ಲಭ್ಯವಾಗುವ ಅನುದಾನದಲ್ಲಿ ಕನಿಷ್ಠ ಶೇ.25ರಷ್ಟು ಹಣವನ್ನು ಶಿಕ್ಷಣ ಕ್ಷೇತ್ರಕ್ಕೆ ಬಳಸಬೇಕು ಎಂಬ ಆದೇಶವನ್ನು ಮಂಡಳಿ ಹೊರಡಿಸಿದೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗಾಗಿ ಕಳೆದ ಮೂರು ವರ್ಷಗಳಲ್ಲಿ ಸರ್ಕಾರದಿಂದ ಸುಮಾರು 18 ಕೋಟಿ ಅನುದಾನ ನೀಡಲಾಗಿದೆ. ಇದರಲ್ಲಿ ಶಿಕ್ಷಣ ಕ್ಷೇತ್ರಕ್ಕೂ ಹೆಚ್ಚಿನ ಆದ್ಯತೆ ನೀಡಲಾಗಿದ್ದು, ಕೊಠಡಿಗಳ ನಿರ್ಮಾಣ ಸೇರಿದಂತೆ ವಿವಿಧ ಶೈಕ್ಷಣಿಕ ಮೂಲಸೌಕರ್ಯ ಅಭಿವೃದ್ಧಿಗೆ ಹಣ ಬಳಸಲಾಗುತ್ತಿದೆ ಎಂದರು.

ಅತಿಥಿ ಶಿಕ್ಷಕರ ನೇಮಕಾತಿಗೂ ಆದ್ಯತೆ ನೀಡಲಾಗಿದ್ದು, ಮೊದಲ ವರ್ಷದಲ್ಲಿ ಸುಮಾರು 18.34 ಕೋಟಿ ವೆಚ್ಚದಲ್ಲಿ 2,684 ಶಿಕ್ಷಕರನ್ನು ನೇಮಕ ಮಾಡಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

ಇದೇ ವೇಳೆ ಕಲ್ಯಾಣ ಕರ್ನಾಟಕದಲ್ಲಿ ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳ ಅಭಿವೃದ್ಧಿಗೂ ಸರ್ಕಾರ ಮುಂದಾಗಿದೆ. ಪ್ರತಿ ಎರಡು ಗ್ರಾಮ ಪಂಚಾಯಿತಿಗಳಿಗೆ ಒಂದು ಏ ಸ್ಥಾಪಿಸುವ ಉದ್ದೇಶ ಹೊಂದಿದ್ದು, ಈಗಾಗಲೇ ಸುಮಾರು 294 ಶಾಲೆಗಳ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ಸರ್ಕಾರ ಜನರ ಬಳಿಗೆ ತೆರಳಿ ಅವರ ಸಮಸ್ಯೆಗಳನ್ನು ಆಲಿಸುವ ಮತ್ತು ಸರ್ಕಾರದ ಯೋಜನೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಕಾರ್ಯಕ್ಕೆ ಆದ್ಯತೆ ನೀಡುತ್ತಿದೆ ಎಂದು ಸಚಿವರು ಹೇಳಿದರು.

ಕೊನೆಯಲ್ಲಿ, ಸಮಾಜದ ಭವಿಷ್ಯ ರೂಪಿಸುವ ಶಿಕ್ಷಕರಿಗೆ ಶಿಕ್ಷಕರ ದಿನಾಚರಣೆ ಶುಭಾಶಯಗಳು ತಿಳಿಸಿದ ಸಚಿವರು, ಯುವ ಪೀಳಿಗೆಗೆ ಉತ್ಸಾಹ ಮತ್ತು ಸ್ಫೂರ್ತಿ ನೀಡುವ ಕಾರ್ಯವನ್ನು ಶಿಕ್ಷಕರು ಮುಂದುವರಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್, ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್.ಭೋಸರಾಜು, ತಾಲೂಕ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ ಕಿಶೋರ್ ಪಾಟೀಲ್, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ, ಡಯಟ್ ಉಪ ನಿರ್ದೇಶಕ ಚಂದ್ರಶೇಖರ ಭಂಡಾರಿ, ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿ ಡಾ.ಈರಣ್ಣ ಕೋಸಗಿ, ಸಾಹಿತಿ ಕೋರೆನಲ್. ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

# ಜನರ ಬಳಿಗೆ ಆಡಳಿತ, ಸಮಸ್ಯೆಗಳಿಗೆ ತ್ವರಿತ ಪರಿಹಾರವೇ ಪ್ರಜಾಸೇವೆಯ ಆಶಯ: ಬಸನಗೌಡ ದದ್ದಲ್

ಕೈಗೊಂಡು ಶೀಘ್ರ ಪರಿಹಾರ ನೀಡುವಂತೆ ಅಧಿಕಾರಿಗಳಿಗೆ ಶಾಸಕ ಬಸನಗೌಡ ದದ್ದಲ್ ಸೂಚಿಸಿದರು.

ಸ್ಥಳದಲ್ಲಿಯೇ ವಿಲೇವಾರಿಯಾದ 423 ಅರ್ಜಿಗಳಲ್ಲಿ ವಿವಿಧ ಗ್ಯಾರಂಟಿ ಯೋಜನೆಗಳ ಸೌಲಭ್ಯಗಳು, ಕಾರ್ಮಿಕರ ಕಾರ್ಡ್, ವೃದ್ಧಾಪ್ಯ ಪಿಂಚಣಿ, ಆರೋಗ್ಯ ಕಾರ್ಡ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ (ಆರ್ ಡಬ್ಲ್ಯೂಎಸ್), ಜೆಸ್ಕಾಂ, ಕಂದಾಯ ಇಲಾಖೆ ಸೇರಿದಂತೆ ಹಲವು ಇಲಾಖೆಗಳ ಸಮಸ್ಯೆಗಳು ಹಾಗೂ ಅರ್ಜಿಗಳು ಸೇರಿದ್ದವು.

ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಬೇಕು. ಸಾಮಾನ್ಯ ಜನರು ಸಣ್ಣಪುಟ್ಟ ಸಮಸ್ಯೆಗಳಿಗೂ ಹಲವು ಬಾರಿ ಕಚೇರಿಗಳಿಗೆ ತೆರಳುವಂತಾಗಬಾರದು. ಅಧಿಕಾರಿಗಳು ಸಾರ್ವಜನಿಕರ ಅಹವಾಲುಗಳಿಗೆ ಸ್ಪಂದಿಸಿ, ಕಾಲಮಿತಿಯೊಳಗೆ ಪರಿಹಾರ ನೀಡಬೇಕು ಎಂದು ಅವರು ಸೂಚಿಸಿದರು.

ಪ್ರಜಾಸೇವೆಯಂತಹ ಕಾರ್ಯಕ್ರಮಗಳ ಮೂಲಕ ಗ್ರಾಮೀಣ ಭಾಗದ ಜನರಿಗೆ ಸರ್ಕಾರದ ಸೇವೆಗಳು ಇನ್ನಷ್ಟು ಸುಲಭವಾಗಿ ತಲುಪಲಿದ್ದು, ಆಡಳಿತ ವ್ಯವಸ್ಥೆಯ ಮೇಲಿನ ಸಾರ್ವಜನಿಕರ ವಿಶ್ವಾಸವೂ ಹೆಚ್ಚಲಿದೆ. ಜನರು ತಮ್ಮ ಸಮಸ್ಯೆಗಳನ್ನು ಮುಕ್ತವಾಗಿ ಅಧಿಕಾರಿಗಳ ಗಮನಕ್ಕೆ ತಂದು, ಸರ್ಕಾರಿ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಡಿವೈಎಸ್‌ಪಿ ಶಾಂತವೀರ, ತಹಶೀಲ್ದಾರ್ ಸುರೇಶ ವರ್ಮ, ತಾಲೂಕು ಪಂಚಾಯಿತಿ ಇಒ ಚಂದ್ರಶೇಖರ ಪವಾರ, ಬಿಇಒ ಈರಣ್ಣ ಕೋಸಗಿ, ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು, ಪಕ್ಷದ ಹಿರಿಯ ಮುಖಂಡರು, ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಶ್ರೀಕೃಷ್ಣ ಜನ್ಮಾಷ್ಟಮಿ ಸಂಭ್ರಮ: ಮಕ್ಕಳ ವೇಷಭೂಷಣ, ಗಾಯನ ಸ್ಪರ್ಧೆ





ಮಂತ್ರಾಲಯ: ಶ್ರೀಕೃಷ್ಣ ಜನ್ಮಾಷ್ಟಮಿಯ ಪವಿತ್ರ ಸಂದರ್ಭದಲ್ಲಿ ಮಂತ್ರಾಲಯದ ಶ್ರೀಮಠದ ಉಂಜಲ್ ಮಂಟಪದಲ್ಲಿ ಶ್ರೀಕೃಷ್ಣ ವೇಷಭೂಷಣ ಸ್ಪರ್ಧೆ ಹಾಗೂ ಗಾಯನ ಸ್ಪರ್ಧೆಯನ್ನು ಭಕ್ತಿ, ಉತ್ಸಾಹ ಮತ್ತು ಸಂಭ್ರಮದಿಂದ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಪುಟ್ಟ ಮಕ್ಕಳು ಶ್ರೀಕೃಷ್ಣ ಹಾಗೂ ಗೋಪಿಕೆಯರ ವೇಷಭೂಷಣ ಧರಿಸಿ ಭಾಗವಹಿಸಿದ್ದು ವಿಶೇಷ ಆಕರ್ಷಣೆಯಾಯಿತು. ಆಕರ್ಷಕ ಉಡುಪು, ನವಿಲುಗರಿಯ ಕಿರೀಟ, ಕೊಳಲು, ಅಲಂಕಾರಿಕ ಆಭರಣಗಳೊಂದಿಗೆ ಶ್ರೀಕೃಷ್ಣನ ರೂಪದಲ್ಲಿ ಮಕ್ಕಳು ಮಿಂಚಿದರೆ, ಗೋಪಿಕೆಯರ ವೇಷದಲ್ಲಿ ಭಾಗವಹಿಸಿದ ಪುಟ್ಟ ಬಾಲಕಿಯರು ತಮ್ಮ ಮುಗ್ಧತೆ ಮತ್ತು ಮನಮೋಹಕ ಅಭಿನಯದಿಂದ ಎಲ್ಲರ ಗಮನ ಸೆಳೆದರು.

ಮಕ್ಕಳ ಉತ್ಸಾಹಭರಿತ ಪ್ರದರ್ಶನದಿಂದ ಉಂಜಲ್ ಮಂಟಪದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಶ್ರೀಕೃಷ್ಣನ ಬಾಲಲೀಲೆಗಳು, ಭಕ್ತಿ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಪ್ರತಿಬಿಂಬಿಸುವ ವಿವಿಧ ರೂಪಕಗಳು ನೆರೆದಿದ್ದ ಭಕ್ತರು ಹಾಗೂ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾದವು.

ಇದೇ ವೇಳೆ ನಡೆದ ಗಾಯನ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳು ಶ್ರೀಕೃಷ್ಣನ ಕುರಿತು ಭಕ್ತಿಗೀತೆಗಳು ಹಾಗೂ ಸಾಂಸ್ಕೃತಿಕ ಗೀತೆಗಳನ್ನು ಹಾಡಿ ತಮ್ಮ ಪ್ರತಿಭೆ ಪ್ರದರ್ಶಿಸಿದರು. ಮಕ್ಕಳ ಗಾಯನ ಮತ್ತು ವೇಷಭೂಷಣ ಪ್ರದರ್ಶನದಿಂದ ಕಾರ್ಯಕ್ರಮಕ್ಕೆ ಮತ್ತಷ್ಟು ಮೆರುಗು ದೊರೆಯಿತು.

ಕಾರ್ಯಕ್ರಮದ ಅಂಗವಾಗಿ ಪರಮಪೂಜ್ಯ ಶ್ರೀ ಸ್ವಾಮೀಜಿಯವರು ಅನುಗ್ರಹ ಸಂದೇಶ ನೀಡಿ, ಶ್ರೀಕೃಷ್ಣನ ಜೀವನ, ಧರ್ಮ, ಭಕ್ತಿ ಹಾಗೂ ಸತ್ಯದ ಸಂದೇಶಗಳನ್ನು ಸ್ಮರಿಸಿದರು. ಮಕ್ಕಳಲ್ಲಿ ಧಾರ್ಮಿಕ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಬೆಳೆಸುವಲ್ಲಿ ಇಂತಹ ಕಾರ್ಯಕ್ರಮಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಆಶೀರ್ವಚನ ನೀಡಿದರು.

ನಂತರ ವೇಷಭೂಷಣ ಹಾಗೂ ಗಾಯನ ಸ್ಪರ್ಧೆಗಳಲ್ಲಿ ಉತ್ತಮ ಪ್ರದರ್ಶನ ನೀಡಿದ ವಿಜೇತರಿಗೆ ಬಹುಮಾನಗಳನ್ನು ವಿತರಿಸಲಾಯಿತು. ಸ್ಪರ್ಧೆಯಲ್ಲಿ ಭಾಗವಹಿಸಿದ ಮಕ್ಕಳನ್ನೂ ಪ್ರೋತ್ಸಾಹಿಸಿ ಗೌರವಿಸಲಾಯಿತು.

ಪುಟ್ಟ ಮಕ್ಕಳ ಸಂಭ್ರಮ, ಭಕ್ತಿಗೀತೆಗಳು, ಶ್ರೀಕೃಷ್ಣ ಹಾಗೂ ಗೋಪಿಕೆಯರ ವೇಷಭೂಷಣ ಮತ್ತು ಶ್ರೀ ಸ್ವಾಮೀಜಿಯವರ ಅನುಗ್ರಹ ಸಂದೇಶದಿಂದ ಇಡೀ ಕಾರ್ಯಕ್ರಮ ಭಕ್ತಿ ಮತ್ತು ಸಂತಸದ ವಾತಾವರಣದಲ್ಲಿ ನೆರವೇರಿತು. ಶ್ರೀಕೃಷ್ಣ ಜನ್ಮಾಷ್ಟಮಿ ಆಚರಣೆ ಎಲ್ಲರ ಮನಸ್ಸಿನಲ್ಲಿ ಸ್ಮರಣೀಯ ಕ್ಷಣಗಳನ್ನು ಮೂಡಿಸಿತು.

# ನೂತನ ಪಲ್ಸರ್ ಬೈಕ್‌ಗಳ ಅದ್ದೂರಿ ಲಾಂಚಿಂಗ್



ದೇವದುರ್ಗ: ಪಟ್ಟಣದ ಶಹಾ ಬಜಾಜ್ ಶೋರೂಂ ವತಿಯಿಂದ ನೂತನ ಪಲ್ಸರ್ ಬೈಕ್‌ಗಳ ಲಾಂಚಿಂಗ್ ಕಾರ್ಯಕ್ರಮವನ್ನು ಅತ್ಯಂತ ಅದ್ದೂರಿ ಹಾಗೂ ಸಂಭ್ರಮದಿಂದ ಆಯೋಜಿಸಲಾಯಿತು. ಬಜಾಜ್ ಆಟೋ ಸಂಸ್ಥೆಯ ನವೀನ ವಿನ್ಯಾಸ, ಆಧುನಿಕ ತಂತ್ರಜ್ಞಾನ ಹಾಗೂ ಯುವಜನರನ್ನು ಗಮನದಲ್ಲಿಟ್ಟುಕೊಂಡು ಪರಿಚಯಿಸಿರುವ ನೂತನ ಪಲ್ಸರ್ ಸರಣಿಯ ಬೈಕ್‌ಗಳನ್ನು ಈ ಸಂದರ್ಭದಲ್ಲಿ ಅಧಿಕೃತವಾಗಿ ಅನಾವರಣಗೊಳಿಸಲಾಯಿತು.

ಪಟ್ಟಣದ ಮಿನಿವಿಧಾನಸೌಧ ರಸ್ತೆಯ ಶಾಂತಿನಗರದಲ್ಲಿರುವ ಬಸವರಾಜ ಮಡಿವಾಳ ಅವರ ಕಾಂಪ್ಲೆಕ್ಸ್‌ನ ಶಹಾ ಬಜಾಜ್ ಶೋರೂಂನಲ್ಲಿ ನೂತನ ಪಲ್ಸರ್ ಬೈಕ್‌ಗಳ ಲಾಂಚಿಂಗ್ ಕಾರ್ಯಕ್ರಮ ಸಂಭ್ರಮದ ವಾತಾವರಣದಲ್ಲಿ ನಡೆಯಿತು.

ಕಾರ್ಯಕ್ರಮದಲ್ಲಿ ಪಲ್ಸರ್ -160, ಪಲ್ಸರ್ -150 ಹಾಗೂ ಪಲ್ಸರ್ -125 ಸೇರಿದಂತೆ ನೂತನ ಮಾದರಿಗಳನ್ನು ಪರಿಚಯಿಸಲಾಯಿತು. ಬೈಕ್‌ಗಳ ಆಕರ್ಷಕ ವಿನ್ಯಾಸ, ಆಧುನಿಕ ವೈಶಿಷ್ಟ್ಯಗಳು ಹಾಗೂ ಕಾರ್ಯಕ್ಷಮತೆಯ ಕುರಿತು ಗ್ರಾಹಕರಿಗೆ ಮಾಹಿತಿ ನೀಡಲಾಯಿತು. ನೂತನ ಪಲ್ಸರ್ ಮಾದರಿಗಳನ್ನು ವೀಕ್ಷಿಸಲು ಹೆಚ್ಚಿನ ಸಂಖ್ಯೆಯಲ್ಲಿ ಬೈಕ್ ಪ್ರಿಯರು ಹಾಗೂ ಗ್ರಾಹಕರು ಶೋರೂಂಗೆ ಆಗಮಿಸಿದ್ದರು.

ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಉದ್ಘಾಟನೆಯ ದಿನವೇ ಪಲ್ಸರ್ -125 ಬೈಕ್‌ಗೆ ಎರಡು ಬುಕ್ಕಿಂಗ್‌ಗಳು ನಡೆದಿದ್ದು, ನೂತನ ಪಲ್ಸರ್ ಬೈಕ್‌ಗಳಿಗೆ ಗ್ರಾಹಕರಿಂದ ದೊರೆಯುತ್ತಿರುವ ಉತ್ತಮ ಪ್ರತಿಕ್ರಿಯೆಗೆ ಇದು ಸಾಕ್ಷಿಯಾಯಿತು. ಹೊಸ ಮಾದರಿಗಳ ಕುರಿತು ಗ್ರಾಹಕರು ಹಾಗೂ ಯುವಕರಲ್ಲಿ ಸಾಕಷ್ಟು ಕುತೂಹಲ ಮತ್ತು ಉತ್ಸಾಹ ಕಂಡುಬಂತು.

ಈ ವೇಳೆ ಶಹಾ ಬಜಾಜ್ ಶೋರೂಂ ಸಿಬ್ಬಂದಿ ವರ್ಗ, ಮೆಕ್ಯಾನಿಕ್ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು, ಬೈಕ್ ಪ್ರಿಯರು ಮತ್ತು ಗ್ರಾಹಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ನೂತನ ಪಲ್ಸರ್ ಮಾದರಿಗಳ ಲಾಂಚಿಂಗ್‌ಗೆ ಸಾಕ್ಷಿಯಾದರು.

ನೂತನ ಪಲ್ಸರ್ ಸರಣಿಯ ಬೈಕ್‌ಗಳು ಯುವಕರ ನಿರೀಕ್ಷೆಗೆ ತಕ್ಕಂತೆ ಆಕರ್ಷಕ ವಿನ್ಯಾಸ ಹಾಗೂ ಆಧುನಿಕ ವೈಶಿಷ್ಟ್ಯಗಳನ್ನು ಒಳಗೊಂಡಿದ್ದು, ದೇವದುರ್ಗ ಭಾಗದ ಗ್ರಾಹಕರಿಗೆ ಹೊಸ ಚಾಲನಾ ಅನುಭವ ನೀಡುವ ನಿರೀಕ್ಷೆ ಮೂಡಿಸಿದೆ. ನೂತನ ಮಾದರಿಗಳ ಬಿಡುಗಡೆಯೊಂದಿಗೆ ದೇವದುರ್ಗದಲ್ಲಿ ಬಜಾಜ್ ಪಲ್ಸರ್ ಸರಣಿಗೆ ಮತ್ತಷ್ಟು ಬೇಡಿಕೆ ಹೆಚ್ಚಾಗುವ ವಿಶ್ವಾಸವನ್ನು ಶಹಾ ಬಜಾಜ್ ಶೋರೂಂ ಸಿಬ್ಬಂದಿ ವ್ಯಕ್ತಪಡಿಸಿದರು.

ಕಾರ್ಯಕ್ರಮವು ಬೈಕ್ ಪ್ರಿಯರ ಸಂಭ್ರಮದ ನಡುವೆ ಯಶಸ್ವಿಯಾಗಿ ನಡೆಯಿತು. ಗ್ರಾಹಕರಿಗೆ ನೂತನ ಪಲ್ಸರ್ ಮಾದರಿಗಳ ಕುರಿತು ಸಂಪೂರ್ಣ ಮಾಹಿತಿ ನೀಡುವುದರ ಜೊತೆಗೆ ಬುಕ್ಕಿಂಗ್ ಹಾಗೂ ಹಣಕಾಸು ಸೌಲಭ್ಯಗಳ ಬಗ್ಗೆಯೂ ಮಾರ್ಗದರ್ಶನ ನೀಡಲಾಯಿತು.

ಈ ಲಾಂಚಿಂಗ್ ಕಾರ್ಯಕ್ರಮಕ್ಕೆ ಎಸ್‌ಬಿಐ ಬ್ಯಾಂಕ್ ಮ್ಯಾನೇಜರ್ ರಾಹುಲ್ ಕುಮಾರ್ ಸಿಂಗ್ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಶ್ರೀರಾಮ್ ಫೈನಾನ್ಸ್ ಮ್ಯಾನೇಜರ್ ಶರಣ ಪಾಟೀಲ್, ದೇವದುರ್ಗ ಮೆಕ್ಯಾನಿಕ್ ಅಸೋಸಿಯೇಷನ್ ಅಧ್ಯಕ್ಷ ಅಬ್ದುಲ್ ಲಿಮ್ರಾ ಮೆಕ್ಯಾನಿಕ್, ಕಮಾಂಡ್ ಏರಿಯಾ ಮ್ಯಾನೇಜರ್ ಅಹಮದ್ ದಬ್ಬೆರ್ ರಾಯಚೂರು, ಶಹಾ ಬಜಾಜ್ ದೇವದುರ್ಗ ಶಾಖೆಯ ಬ್ರಾಂಚ್ ಮ್ಯಾನೇಜರ್ ಇಲಿಯಾಸ್ ಮೋಮಿನ್ ಹಾಗೂ ಎಬಿ ವಿಶಾಲ್, ಸರ್ವಿಸ್ ಮ್ಯಾನೇಜರ್ ಸೇರಿದಂತೆ ಇನ್ನಿತರ ಗಣ್ಯರು ಉಪಸ್ಥಿತರಿದ್ದರು.

# ಅಂಜುಮನ್ ಕಮಿಟಿಯಿಂದ ಮಕ್ತಬ್ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಾಮಗ್ರಿ ವಿತರಣೆ



ಲಿಂಗಸುಗೂರು: ಹಜರತ್ ಮೊಹಮ್ಮದ್ ಪೈಗಂಬರ್ (ಸ) ಅವರ ಪವಿತ್ರ ಜನ್ಮದಿನದ ಪ್ರಯುಕ್ತ ಅಂಜುಮನ್-ಎ-ಮುಸ್ಲಿಮೀನ್ ಲಿಂಗಸುಗೂರು ತಾಲೂಕು ಕಮಿಟಿ ವತಿಯಿಂದ ಕಸಬಾಲಿಂಗಸೂಗೂರು ಗ್ರಾಮದಲ್ಲಿ ಮಕ್ತಬ್‌ನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬ್ಯಾಗ್,ಶೂ,ಪುಸ್ತಕ ಹಾಗೂ ಪೆನ್ನುಗಳನ್ನು ವಿತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಉತ್ತೇಜನ ನೀಡುವ ಹಾಗೂ ಶಿಕ್ಷಣದ ಬಗ್ಗೆ ಆಸಕ್ತಿ ಬೆಳೆಸುವ ಉದ್ದೇಶದಿಂದ ಆಯೋಜಿಸಲಾಗಿದ್ದ ಈ ಕಾರ್ಯಕ್ರಮದಲ್ಲಿ ಮಕ್ತಬ್‌ನ ಎಲ್ಲಾ ವಿದ್ಯಾರ್ಥಿಗಳಿಗೆ ಅಗತ್ಯ ಶೈಕ್ಷಣಿಕ ಸಾಮಗ್ರಿಗಳನ್ನು ವಿತರಿಸಲಾಯಿತು.ಈ ಸಂದರ್ಭದಲ್ಲಿ ಕಸಬಾಲಿಂಗಸೂಗೂರು ಗ್ರಾಮದ ಜಾಮಿಯಾ ಮಸ್ಜಿದ್ ಕಮಿಟಿಯ ಅಧ್ಯಕ್ಷರಾದ ಜನಾಬ್ ಖಾಜಾಸಾಬ್ ಗೊಲ್ಲಗೇರಿ, ಉಪಾಧ್ಯಕ್ಷರಾದ ಮೈನುದ್ದಿನ್ ಕಾರ್ಪೆಂಟರ,ಜನಾಬ್ ಹಾಜಿ ಅಲ್ಲಸಾಬ್ ಹಿರೇಮನಿ, ಅಲ್ಲಸಾಬ್ ಹೋಟೆಲ್,ಜನಾಬ್ ಇಬ್ರಾಹಿಂ ಹಾಫಿಜ್ ಸಾಬ್, ಜನಾಬ್ ಖಾಸಿಂಸಾಬ್ ಬಾಗವಾನ್ ,ಜನಾಬ್ ಅಮೀನ್ ಸಾಬ್ ಬಾಗವಾನ್,ಜನಾಬ್ ದಾವಲ್ ಸಾಬ್ ಹಣಗಿ,ಜನಾಬ್ ಇಬ್ರಾಹಿಂ ಬಾಗವಾನ್,ಜನಾಬ್ ಖಾಜಾಸಾಬ್ ಹಿರೇಮನಿ, ಮೊಹಮ್ಮದ್ ಭಾಗವಾನ್,

ಅಂಜುಮನ್-ಎ-ಮುಸ್ಲಿಮೀನ್ ಲಿಂಗಸೂಗೂರು ತಾಲೂಕು ಕಮಿಟಿಯ ಗೌರವ ಅಧ್ಯಕ್ಷರಾದ ಅನ್ಸರುದ್ದಿನ್,ಅಧ್ಯಕ್ಷರಾದ ಹುಸೇನ್ ಭಾಷಾ,ಪ್ರಧಾನ ಕಾರ್ಯದರ್ಶಿ ಸಲೀಂ ಪಾಷಾ ಕಾರ್ಪೆಂಟರ,ವಸೀಂ ಪಾಷಾ, ಅಮೀನುದ್ದಿನ್ ಟೈಲರ,ವಸೀಂ ಅಕ್ರಂ, ಶೇಖ್ ಅಲಿ, ನಸೀಮ್, ಉಬೆದ್ ಚೌಧ್ರಿ,ಆರೀಫ್, ಆಸೀಫ್,ದಾವಲ್ ಸಾಬ್, ಆದಿಲ್, ಉಮ್ರ,ಸದ್ದಾಂ ಸೇರಿದಂತೆ ಕಮಿಟಿಯ ಪದಾಧಿಕಾರಿಗಳು ಹಾಗೂ ಕಾರ್ಯಕಾರಿ ಸಮಿತಿ ಇದ್ದರು. ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಅಗತ್ಯ ಸಹಕಾರ ನೀಡುವ ಮೂಲಕ ಸಮುದಾಯದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡುವುದು ಅಂಜುಮನ್-ಎ-ಮುಸ್ಲಿಮೀನ್ ಲಿಂಗಸೂಗೂರು ತಾಲೂಕು ಕಮಿಟಿಯ ಪ್ರಮುಖ ಸಾಮಾಜಿಕ ಕಾಳಜಿಗಳಲ್ಲಿ ಒಂದಾಗಿದೆ ಎಂದು ಹೇಳಿದರು.

# ವಸತಿ ಶಾಲೆಗಳಲ್ಲಿ ಮಕ್ಕಳ ಆಹಾರ ಸುರಕ್ಷತೆಗೆ ಹೆಚ್ಚಿನ ನಿಗಾ ವಹಿಸಿ



ಮಾನ್ವಿ, ಸೆ.5: ವಸತಿ ಶಾಲೆ ಹಾಗೂ ವಸತಿ ನಿಲಯಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ಆಹಾರ ತಯಾರಿಕೆ, ದಾಸ್ತಾನು ಮತ್ತು ಸ್ವಚ್ಛತೆಗೆ ಅಡುಗೆ ಸಿಬ್ಬಂದಿ ಹೆಚ್ಚಿನ ಆದ್ಯತೆ ನೀಡಬೇಕು. ಮಕ್ಕಳ ಆರೋಗ್ಯವನ್ನು ನಿಯಮಿತವಾಗಿ ಆರೋಗ್ಯ ಇಲಾಖೆಯ ವೈದ್ಯಕೀಯ ತಂಡದಿಂದ ತಪಾಸಣೆ ಮಾಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಸೂಚಿಸಿದರು.

ಪಟ್ಟಣದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಉಪಹಾರ ಸೇವಿಸಿದ ನಂತರ ಕೆಲ ವಿದ್ಯಾರ್ಥಿಗಳಲ್ಲಿ ಅಸ್ವಸ್ಥತೆ ಕಂಡುಬಂದ ಹಿನ್ನೆಲೆಯಲ್ಲಿ, ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಗುಣಮುಖರಾದ ವಿದ್ಯಾರ್ಥಿಗಳು ಹಾಗೂ ವಸತಿ ಶಾಲೆಯ ಮಕ್ಕಳನ್ನು ಭೇಟಿ ಮಾಡಿ ಆರೋಗ್ಯ ವಿಚಾರಿಸಿ ಧೈರ್ಯ ತುಂಬಿದರು.

ಬಳಿಕ ವೈದ್ಯಕೀಯ ತಂಡದೊಂದಿಗೆ ವಸತಿ ಶಾಲೆಯ ಅಡುಗೆ ಮನೆಗೆ ಭೇಟಿ ನೀಡಿ ಆಹಾರ ಪದಾರ್ಥಗಳ ದಾಸ್ತಾನು ವ್ಯವಸ್ಥೆ, ತರಕಾರಿ ಸ್ವಚ್ಛಗೊಳಿಸುವ ವಿಧಾನ, ಕುಡಿಯುವ ನೀರಿನ ಸಂಗ್ರಹ ಹಾಗೂ ಅಡುಗೆ ಸಿದ್ಧಪಡಿಸುವ ಸ್ಥಳದ ಸ್ವಚ್ಛತೆಯನ್ನು ಪರಿಶೀಲಿಸಿದರು.

ಮಕ್ಕಳಿಗೆ ಆಹಾರ ಸಿದ್ಧಪಡಿಸುವ ಪ್ರತಿಯೊಂದು ಹಂತದಲ್ಲೂ ಸಿಬ್ಬಂದಿ ಎಚ್ಚರಿಕೆ ವಹಿಸಬೇಕು. ತರಕಾರಿ ಹಾಗೂ ಇತರೆ ಆಹಾರ ಪದಾರ್ಥಗಳನ್ನು ನೆಲದ ಮೇಲೆ ಇಡಬಾರದು. ದವಸ-ಧಾನ್ಯಗಳ ಬಳಿ ಇಲಿ ಹಾಗೂ ಕೀಟಗಳು ಸುಳಿಯದಂತೆ ಸುರಕ್ಷಿತವಾಗಿ ಸಂಗ್ರಹಿಸಬೇಕು. ತರಕಾರಿಗಳನ್ನು ಶುದ್ಧ ನೀರಿನಿಂದ ಚೆನ್ನಾಗಿ ತೊಳೆದು ಬಳಸಬೇಕು. ಸಿದ್ಧಪಡಿಸಿದ ಮತ್ತು ಸಿದ್ಧಪಡಿಸದ ಆಹಾರ ಪದಾರ್ಥಗಳನ್ನು ಪ್ರತ್ಯೇಕವಾಗಿ ಇರಿಸಬೇಕು ಎಂದು ತಿಳಿಸಿದರು.

ವಿವಿಧ ಕಾಳು ಹಾಗೂ ದವಸ-ಧಾನ್ಯಗಳನ್ನು ಮುಚ್ಚಳವಿರುವ ಡಬ್ಬಗಳಲ್ಲಿ ಸುರಕ್ಷಿತವಾಗಿ ಸಂಗ್ರಹಿಸಬೇಕು. ಅಡುಗೆ ಸಾಮಗ್ರಿಗಳನ್ನು ಸ್ವಚ್ಛಗೊಳಿಸುವ ಸ್ಥಳದಲ್ಲಿ ನೀರು ಸರಾಗವಾಗಿ ಹರಿದು ಹೋಗುವ ವ್ಯವಸ್ಥೆ ಇರಬೇಕು. ಅಡುಗೆ ಮನೆ ಮತ್ತು ಸುತ್ತಮುತ್ತಲಿನ ನೆಲವನ್ನು ಪ್ರತಿದಿನ ಸ್ವಚ್ಛಗೊಳಿಸಿ ನೈರ್ಮಲ್ಯ ಕಾಪಾಡಿಕೊಳ್ಳಬೇಕು. ಮುಖ್ಯವಾಗಿ ಮಕ್ಕಳಿಗೆ ಊಟ ಬಡಿಸುವ ಮೊದಲು ಅಡುಗೆ ಸಿಬ್ಬಂದಿ ಕೈಗಳನ್ನು ಸಾಬೂನು ಮತ್ತು ಶುದ್ಧ ನೀರಿನಿಂದ ಚೆನ್ನಾಗಿ ತೊಳೆದುಕೊಳ್ಳಬೇಕು ಎಂದು ಸೂಚಿಸಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಗಣೇಶ್ ಕೆ. ಮಾತನಾಡಿ, ಮಕ್ಕಳು ಮನೆಯಲ್ಲಿರಲಿ ಅಥವಾ ವಸತಿ ನಿಲಯದಲ್ಲಿರಲಿ ವೈಯಕ್ತಿಕ ಸ್ವಚ್ಛತೆಗೆ ಹೆಚ್ಚಿನ ಗಮನ ನೀಡಬೇಕು. ಶುದ್ಧ ಕುಡಿಯುವ ನೀರನ್ನು ಮಾತ್ರ ಸೇವಿಸಬೇಕು. ಊಟಕ್ಕೆ ಮುನ್ನ ಹಾಗೂ ಶೌಚಾಲಯ ಬಳಸಿದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ ಕಡ್ಡಾಯವಾಗಿ ತೊಳೆಯಬೇಕು. ಸಾಧ್ಯವಾದಷ್ಟು ಬಿಸಿಯಾದ, ತಾಜಾ ಆಹಾರ ಸೇವಿಸಬೇಕು ಎಂದು ಸಲಹೆ ನೀಡಿದರು.

ಮಕ್ಕಳ ಆರೋಗ್ಯದಲ್ಲಿ ಯಾವುದೇ ವ್ಯತ್ಯಾಸ ಕಂಡುಬಂದರೆ ನಿರ್ಲಕ್ಷಿಸದೆ ತಕ್ಷಣ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ಪಡೆಯಬೇಕು. ಆರೋಗ್ಯ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲಿಯೇ ಗುರುತಿಸಿದರೆ ಹೆಚ್ಚಿನ ತೊಂದರೆ ತಪ್ಪಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ. ಶಿವಕುಮಾರ್ ನಾರಾ, ತಾಲೂಕು ಆರೋಗ್ಯಾಧಿಕಾರಿ ಡಾ. ಶರಣಬಸವರಾಜ್, ಮಕ್ಕಳ ತಜ್ಞ ಡಾ. ಶರಣಪ್ಪ, ಪ್ರಾಂಶುಪಾಲ ವೆಂಕಟೇಶ್ ನಾಯಕ, ವಾರ್ಡನ್ ರಮೇಶ ನಾಯಕ, ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ಕನಕಾಚಲ ಪದಕಿ, ಹಿರಿಯ ಎಚ್‌ಐಓ ಶೇಖರ, ಹಿರಿಯ ಪಿಎಚ್‌ಸಿಓ ಪದ್ಮಾ, ಬಿಪಿಎಂ ರಾಜೇಶ್ ಆರ್. ಸೇರಿದಂತೆ ಶಿಕ್ಷಕರು ಹಾಗೂ ಅಡುಗೆ ಸಿಬ್ಬಂದಿ ಉಪಸ್ಥಿತರಿದ್ದರು.

# ಸಿಂಗಲ್ ಆರ್ಡರ್‌ನಲ್ಲಿ 150 ವೋಲ್ವೋ ಬಸ್ ಖರೀದಿ

ಬೆಂಗಳೂರು: ಸಾರಿಗೆ ಕ್ಷೇತ್ರದಲ್ಲಿ ವಿಜಯಾನಂದ ಟ್ರಾವೆಲ್ಸ್ ಪ್ರೈ.ಲಿ. (ವಿಟಿಪಿಎಲ್) ಹೊಸ ದಾಖಲೆ ಬರೆದಿದ್ದು, ವೋಲ್ವೋ ಇಂಡಿಯಾ ಸಂಸ್ಥೆಯಿಂದ ಒಂದೇ ಆರ್ಡರ್‌ನಲ್ಲಿ 150 ವೋಲ್ವೋ ಬಸ್‌ಗಳನ್ನು ಖರೀದಿಸಿದೆ. ವಿಜಯಾನಂದ ಟ್ರಾವೆಲ್ಸ್‌ಗೆ 150 ವೋಲ್ವೋ-9600 ಐಷಾರಾಮಿ ಸ್ಲೀಪರ್ ಕೋಚ್ ಗೋಲ್ಡ್ ಕ್ಲಾಸ್ ಬಸ್‌ಗಳನ್ನು ಹಸ್ತಾಂತರಿಸಲಾಗಿದ್ದು, ಖಾಸಗಿ ಟ್ರಾವೆಲ್ಸ್ ಸಂಸ್ಥೆಯೊಂದು ವೋಲ್ವೋ ಬಸ್‌ಗಳಿಗೆ ನೀಡಿದ ಅತಿದೊಡ್ಡ ಆರ್ಡರ್ ಇದಾಗಿದೆ.

ನಗರದ ಖಾಸಗಿ ಹೋಟೆಲ್‌ನಲ್ಲಿ ನಡೆದ ಸಮಾರಂಭದಲ್ಲಿ ವೋಲ್ವೋ ಸಂಸ್ಥೆಯ ಎಂಡಿ ಮತ್ತು ಸಿಇಒ ಬಿ. ಶ್ರೀನಿವಾಸ್ ಅವರು ವಿಆರ್‌ಎಲ್ ಮೀಡಿಯಾ ಪ್ರೈ.ಲಿ. ವ್ಯವಸ್ಥಾಪಕ ನಿರ್ದೇಶಕ ಡಾ. ಆನಂದ ಸಂಕೇಶ್ವರ ಹಾಗೂ ವಿಜಯಾನಂದ ಟ್ರಾವೆಲ್ಸ್ ಪ್ರೈ.ಲಿ. ವ್ಯವಸ್ಥಾಪಕ ನಿರ್ದೇಶಕ ಶಿವಾ ಸಂಕೇಶ್ವರ ಅವರಿಗೆ ಕೀ ಹಸ್ತಾಂತರಿಸುವ ಮೂಲಕ ಬಸ್‌ಗಳನ್ನು ನೀಡಿದರು. ವೋಲ್ವೋ ಸಂಸ್ಥೆಯ ವಿಇ ವಾಣಿಜ್ಯ ವಾಹನಗಳ ವಿಭಾಗದ ಮುಖ್ಯ ವಾಣಿಜ್ಯ ಅಧಿಕಾರಿ ಎಸ್.ಎಸ್. ಗಿಲ್ ಮತ್ತು ವಿಇ ವಾಣಿಜ್ಯ ವಾಹನಗಳ ಬಸ್ ವಿಭಾಗದ ಇವಿಪಿ ಸುರೇಶ್ ಚೆಟ್ಟಿಯಾರ್ ಉಪಸ್ಥಿತರಿದ್ದರು.

ಈ ವೇಳೆ ಮಾತನಾಡಿದ ಡಾ. ಆನಂದ ಸಂಕೇಶ್ವರ, ವಿಜಯಾನಂದ ಟ್ರಾವೆಲ್ಸ್ 1996ರಲ್ಲಿ ಆರಂಭವಾಯಿತು. 2007ರಿಂದ ವೋಲ್ವೋ ಕಂಪನಿಯೊಂದಿಗೆ ಒಪ್ಪಂದ ಹೊಂದಿದ್ದೇವೆ. ಆರಂಭದಲ್ಲಿ 20 ಬಸ್‌ಗಳನ್ನು ಖರೀದಿಸಿದ್ದೆವು. 2012ರ ವೇಳೆಗೆ 100 ಬಸ್‌ಗಳನ್ನು ಆರ್ಡರ್ ಮಾಡಿದ್ದೆವು. ಇದೀಗ 150 ಬಸ್‌ಗಳನ್ನು ಆರ್ಡರ್ ಮಾಡಿದ್ದೇವೆ. ರಾಜ್ಯ ಮತ್ತು ದೇಶಾದ್ಯಂತ ನಮ್ಮ ನೆಟ್‌ವರ್ಕ್ ಇರುವುದರಿಂದ ಪ್ರಯಾಣಿಕರಿಗೆ ಅತ್ಯುತ್ತಮ ಸೇವೆ ನೀಡುವುದು ನಮ್ಮ ಗುರಿಯಾಗಿದೆ ಎಂದರು.

ಇತ್ತೀಚಿನ ದಿನಗಳಲ್ಲಿ ಪ್ರಯಾಣಿಕರು ಬಸ್ ಬುಕ್ಕಿಂಗ್ ಮಾಡುವಾಗಲೇ ಶೌಚಾಲಯದ ವ್ಯವಸ್ಥೆ ಇದೆಯೇ ಎಂದು ವಿಚಾರಿಸುತ್ತಿದ್ದಾರೆ. ಬಸ್‌ನಲ್ಲಿಯೇ ಶೌಚಾಲಯದ ವ್ಯವಸ್ಥೆ ಇರುವುದರಿಂದ ಪ್ರಯಾಣದ ಸಮಯವೂ ಉಳಿತಾಯವಾಗಲಿದೆ. ಶೌಚಕ್ಕಾಗಿ ಬಸ್ ನಿಲ್ಲಿಸಿದರೆ ಕನಿಷ್ಠ ಅರ್ಧ ಗಂಟೆ ಸಮಯ ವ್ಯರ್ಥವಾಗುತ್ತದೆ. ಈ ಸಮಯ ಉಳಿದರೆ ಪ್ರಯಾಣಿಕರು ನಿಗದಿತ ಸ್ಥಳವನ್ನು ಬೇಗ ತಲುಪಲು ಅನುಕೂಲವಾಗಲಿದೆ ಎಂದು ತಿಳಿಸಿದರು.

ಎಲ್ಲ ಬಸ್‌ಗಳನ್ನು ಒಂದು ಕಡೆ ನಿಲ್ಲಿಸಿ ವೋಲ್ವೋವನ್ನು ಮತ್ತೊಂದು ಕಡೆ ನಿಲ್ಲಿಸಿದರೂ ಅದು ತನ್ನದೇ ಆದ ವಿಶೇಷತೆ ಹಾಗೂ ಆಕರ್ಷಕ ಹೊರನೋಟದಿಂದ ಗಮನ ಸೆಳೆಯುತ್ತದೆ. ಆದ್ದರಿಂದಲೇ ಅನುಮಾನವೇ ಬೇಡ, ವೋಲ್ವೋ ನೆಕ್ಸ್ಟ್ ಲೆವೆಲ್ ಎಂದು ಹೇಳುತ್ತೇನೆ ಎಂದು ವಿಜಯಾನಂದ ಟ್ರಾವೆಲ್ಸ್ ಪ್ರೈ.ಲಿ. ವ್ಯವಸ್ಥಾಪಕ ನಿರ್ದೇಶಕ ಶಿವಾ ಸಂಕೇಶ್ವರ ಹೇಳಿದರು.

ಈ ಹಿಂದೆ ಬಸ್‌ಗಳನ್ನು ಸ್ವೀಡನ್‌ನಲ್ಲಿ ಉತ್ಪಾದಿಸಲಾಗುತ್ತಿತ್ತು. ಇದೀಗ ಹೊಸಕೋಟೆ ಘಟಕದಲ್ಲಿಯೇ ಬಸ್‌ಗಳನ್ನು ಉತ್ಪಾದಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಹೂಡಿಕೆಯು ತಂತ್ರಜ್ಞಾನ, ಸುರಕ್ಷತಾ ಇಂಜಿನಿಯರಿಂಗ್ ಮತ್ತು ಸೇವಾ ಪರಿಸರ ವ್ಯವಸ್ಥೆಯ ಮೇಲಿನ ನಿರಂತರ ವಿಶ್ವಾಸವನ್ನು ಪ್ರತಿಬಿಂಬಿಸುತ್ತದೆ ಎಂದು ವೋಲ್ವೋ ಸಂಸ್ಥೆಯ ಎಂಡಿ ಮತ್ತು ಸಿಇಒ ಬಿ. ಶ್ರೀನಿವಾಸ್ ತಿಳಿಸಿದರು.

ಭಾರತದಲ್ಲಿ ವೋಲ್ವೋ ಬಸ್‌ಗಳ ಅತ್ಯಂತ ಮೌಲ್ಯಯುತ ಮತ್ತು ದೀರ್ಘಕಾಲೀನ ಖಾಸಗಿ ಆಪರೇಟರ್ ಪಾಲುದಾರರಲ್ಲಿ ವಿಜಯಾನಂದ ಟ್ರಾವೆಲ್ ್ ಒಂದಾಗಿದೆ. ಈ ಹೆಗ್ಗುರುತು ಆರ್ಡರ್ ದಶಕಗಳಿಂದ ನಿರ್ಮಾಣವಾದ ನಂಬಿಕೆಗೆ ಪ್ರಬಲ ಸಾಕ್ಷಿಯಾಗಿದೆ. ಪ್ರಯಾಣಿಕರ ಸುರಕ್ಷತೆ, ಸೌಕರ್ಯ ಮತ್ತು ವಿಶ್ವಾಸಾರ್ಹತೆಗೆ ಅತ್ಯುನ್ನತ ಮಾನದಂಡಗಳನ್ನು ನಿಗದಿಪಡಿಸುವ ನಿರ್ವಾಹಕರ ಆದ್ಯತೆಯ ವೇದಿಕೆಯಾಗಿರುವುದಕ್ಕೆ ಹೆಮ್ಮೆ ಇದೆ ಎಂದರು.

ದೂರದ ಪ್ರಯಾಣದಲ್ಲಿ ಶೌಚಾಲಯ ಸೌಲಭ್ಯ ಅತ್ಯಗತ್ಯವಾಗಿದ್ದು, ಹಿರಿಯ ನಾಗರಿಕರು, ಮಹಿಳೆಯರು ಮತ್ತು ಮಕ್ಕಳಿಗೆ ವಿಶೇಷವಾಗಿ ಅನುಕೂಲಕರವಾಗಿದೆ. ವೋಲ್ವೋ 9600 ಕೋಚ್‌ನಲ್ಲಿ ವಿಮಾನದಲ್ಲಿರುವ ಮಾದರಿಯ ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿದೆ. ಇದರಿಂದ ದೂರದ ಪ್ರಯಾಣ ಹೆಚ್ಚು ಆರಾಮದಾಯಕವಾಗಲಿದೆ. ಬಸ್ ಚಲಿಸುತ್ತಿರುವಾಗಲೂ ಶೌಚಾಲಯ ಬಳಸಲು ಅನುಕೂಲವಾಗುವಂತೆ ವಿನ್ಯಾಸಗೊಳಿಸಲಾಗಿದೆ.

ನೂರಾರು ಕಿಲೋಮೀಟರ್ ದೂರ ಪ್ರಯಾಣಿಸುವ ಪ್ರಯಾಣಿಕರ ಅನುಕೂಲಕ್ಕಾಗಿ ಸ್ಲೀಪರ್ ಕೋಚ್‌ಗಳಲ್ಲಿ ಮೃದುವಾದ ಹಾಗೂ ವಿಶಾಲ ಸೀಟುಗಳನ್ನು ಅಳವಡಿಸಲಾಗಿದೆ. ಮನೆಯಲ್ಲಿ ವಿಶ್ರಾಂತಿ ಪಡೆಯುವ ಅನುಭವ ನೀಡುವಂತೆ ಸೀಟುಗಳನ್ನು ವಿನ್ಯಾಸಗೊಳಿಸಲಾಗಿದ್ದು, ದೀರ್ಘ ಪ್ರಯಾಣದಲ್ಲಿಯೂ ದೇಹಕ್ಕೆ ಹೆಚ್ಚು ಆಯಾಸವಾಗದಂತೆ ಆರಾಮದಾಯಕ ವ್ಯವಸ್ಥೆ ಮಾಡಲಾಗಿದೆ.

# ಪ್ರಜಾ ಸೇವೆ ಅಭಿಯಾನ: ಜನರ ಸಮಸ್ಯೆಗಳಿಗೆ ಶಾಸಕ ಬಸನಗೌಡ ತುರುವಿಹಾಳ ಸ್ಪಂದನೆ



ಕವಿತಾಳ: ಜನರ ಮನೆಬಾಗಿಲಿಗೆ ಆಡಳಿತ ಕೊಂಡೊಯ್ಯುವ ಉದ್ದೇಶದಿಂದ ಜಿಲ್ಲಾಡಳಿತ, ತಾಲೂಕು ಆಡಳಿತ ಹಾಗೂ ನೂತನ ಪ್ರಜಾಸೇವಾ ಇಲಾಖೆ ಸಹಯೋಗದಲ್ಲಿ ಸಮೀಪದ ಪಾಮನಕಲ್ಲೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಶನಿವಾರ 'ಪ್ರಜಾ ಸೇವೆ ಅಭಿಯಾನ' (ಪ್ರಜಾ ಸೇವಾ ಆಂದೋಲನ) ಸಭೆ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಹಾಗೂ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷ ಬಸನಗೌಡ ತುರುವಿಹಾಳ ಮಾತನಾಡಿ, ಅಹವಾಲು ನಿಮ್ಮದು, ಪರಿಹಾರ ನಮ್ಮದು ಎಂಬ ಧ್ಯೇಯದೊಂದಿಗೆ ಜನರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಒದಗಿಸಲು ಸರ್ಕಾರ ಬದ್ಧವಾಗಿದೆ. ಸಾರ್ವಜನಿಕರು ಇಲಾಖೆಗಳ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಗ್ರಾಮಸ್ಥರು ಮೂಲಸೌಕರ್ಯ ಹಾಗೂ ಪಿಂಚಣಿ ಸೇರಿದಂತೆ ವಿವಿಧ ಸಮಸ್ಯೆಗಳ ಕುರಿತು ಶಾಸಕರಿಗೆ ಅಹವಾಲು ಸಲ್ಲಿಸಿದರು.

ಸಭೆಯಲ್ಲಿ ಮಸ್ಕಿ ತಹಶೀಲ್ದಾರ್ ಮಂಜುನಾಥ್ ಭೋಗವತಿ, ತಾಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಶಿವಾನಂದ, ಮಸ್ಕಿ ತಾಲೂಕ ಪಂಚ ಗ್ಯಾರಂಟಿ ಅಧ್ಯಕ್ಷ ಮೆಹಬೂಬ್ ಸಾಬ್, ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಗ್ರಾಮಸ್ಥರು

# ವಿದ್ಯಾರ್ಥಿಗಳಿಗೆ ನೈತಿಕ ಮೌಲ್ಯಗಳ ಅರಿವು ಅಗತ್ಯ: ಅಶ್ವಿನಿ ಎಸ್. ಮುಧೋಳ



ಮಾನ್ವಿ: ವಿದ್ಯಾರ್ಥಿಗಳಿಗೆ ಪಾಠ ಬೋಧನೆಯ ಜೊತೆಗೆ ಉತ್ತಮ ವ್ಯಕ್ತಿತ್ವ ರೂಪಿಸಲು ನೈತಿಕ ಮೌಲ್ಯಗಳ ಕುರಿತು ಅರಿವು ಮೂಡಿಸುವುದು ಅಗತ್ಯ ಎಂದು ಶಿಕ್ಷಕಿ ಅಶ್ವಿನಿ ಎಸ್. ಮುಧೋಳ ಹೇಳಿದರು.

ಶನಿವಾರ ಪಟ್ಟಣದ ಬಸವ ಕೈಗಾರಿಕಾ ತರಬೇತಿ ಸಂಸ್ಥೆ (ಐಟಿಐ)ಯಲ್ಲಿ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಆಸಕ್ತಿ ಹಾಗೂ ಪರಿಶ್ರಮದಿಂದ ಅಧ್ಯಯನದಲ್ಲಿ ತೊಡಗಿ ಉನ್ನತ ಸಾಧನೆ ಮಾಡಬೇಕು. ವಿದ್ಯೆ ಕಲಿಸಿದ ಗುರುಗಳು ಹಾಗೂ ಹೆತ್ತ ತಂದೆ-ತಾಯಿಗೆ ಕೀರ್ತಿ ತರುವ ರೀತಿಯಲ್ಲಿ ಜೀವನ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಂಗವಾಗಿ ಮಾಜಿ ರಾಷ್ಟ್ರಪತಿ ಡಾ. ಎಸ್. ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಪೂಜೆ ಸಲ್ಲಿಸಲಾಯಿತು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಹಿರಿಯ ಪತ್ರಕರ್ತ ಬಸವರಾಜ ಭೋಗಾವತಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಬಸವರಡ್ಡಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ತಿಪ್ಪಣ್ಣ ಎಂ. ಹೊಸಮನಿ ಅಧ್ಯಕ್ಷತೆ ವಹಿಸಿದ್ದರು.

ಉಪನ್ಯಾಸಕ ಬಿ. ಬಸವರಾಜ, ಕಿರಿಯ ತರಬೇತಿ ಅಧಿಕಾರಿ ಸುಮಾ ಟಿ. ಹೊಸಮನಿ, ಸಂಪನ್ಮೂಲ ವ್ಯಕ್ತಿ ಮೋಹನ ಯಾದವ, ಜೆಟಿಓ ಸಿಬ್ಬಂದಿಗಳಾದ ಅವಿನಾಶ, ಉಮೇರಾ ತಬಸ್ಸುಮ್ ಹಾಗೂ ಚೈತ್ರಾ ಉಪಸ್ಥಿತರಿದ್ದರು.

# ಕಬಡ್ಡಿಯಲ್ಲಿ ಮಿಂಚಿದ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ವಿದ್ಯಾರ್ಥಿನಿಯರು



ದೇವದುರ್ಗ: ಪಟ್ಟಣದ ಹೊರವಲಯದ ಕ್ರೀಡಾಂಗಣದಲ್ಲಿ ನಡೆದ ದೇವದುರ್ಗ ಪಟ್ಟಣ ವಲಯ ಮಟ್ಟದ ಕ್ರೀಡಾಕೂಟದ ಕಬಡ್ಡಿ ಪಂದ್ಯಾವಳಿಯಲ್ಲಿ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿನಿಯರು ಉತ್ತಮ ಪ್ರದರ್ಶನ ನೀಡಿ ಪ್ರಥಮ ಸ್ಥಾನ ಗಳಿಸುವ ಮೂಲಕ ತಾಲೂಕು ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಪಂದ್ಯಾವಳಿಯಲ್ಲಿ ಕೆ. ಇರಬಗೇರಾ ಸರ್ಕಾರಿ ಪ್ರೌಢಶಾಲೆಯ ಬಲಿಷ್ಠ ತಂಡದ ವಿರುದ್ಧ ರೋಚಕವಾಗಿ ಸೆಣಸಿದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ತಂಡ ಅಂತಿಮವಾಗಿ ಗೆಲುವು ಸಾಧಿಸಿ ವಿಜಯಮಾಲೆ ಮುಡಿಗೇರಿಸಿಕೊಂಡಿತು.

ವಿಜೇತ ತಂಡದ ವಿದ್ಯಾರ್ಥಿನಿಯರಾದ ರಕ್ಷಿತಾ, ರೇಣುಕಾ, ನಾಗರತ್ನ, ತೇಜಸ್ವಿನಿ, ದೇವಮ್ಮ, ಕಾವೇರಿ, ಜ್ಯೋತಿ, ಭಾಗ್ಯವತಿ, ರೇಣುಕಾ ಅಳವೆಳಪ್ಪ ಹಾಗೂ ಮೇಘನಾ ಅವರಿಗೆ ತಾಲೂಕು ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ರಂಗನಾಥ ಚಲುವಾದಿ ಪ್ರಮಾಣಪತ್ರ ವಿತರಿಸಿ, ತಾಲೂಕು ಮಟ್ಟದ ಪಂದ್ಯಾವಳಿಯಲ್ಲಿ ಉತ್ತಮ ಸಾಧನೆ ಮಾಡುವಂತೆ ಶುಭ ಹಾರೈಸಿದರು.

ವಿದ್ಯಾರ್ಥಿನಿಯರಿಗೆ ಉತ್ತಮ ತರಬೇತಿ ನೀಡಿ ಸಾಧನೆಗೆ ಪ್ರೇರಣೆ ನೀಡಿದ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕಿ ಹಾಗೂ ಕಬಡ್ಡಿ ತರಬೇತುದಾರರಾದ ಮಮತಾ ಆದಿ ಅವರನ್ನು ಈ ಸಂದರ್ಭದಲ್ಲಿ ಅಭಿನಂದಿಸಲಾಯಿತು.

ಕಮಲದಿನ್ನಿ ಸರ್ಕಾರಿ ಪ್ರೌಢಶಾಲೆಯ ಮುಖ್ಯಗುರು ರೇಖಾ, ದೈಹಿಕ ಶಿಕ್ಷಣ ಶಿಕ್ಷಕರು ಹಾಗೂ ತೀರ್ಪುಗಾರರಾದ ಚಿದಾನಂದ, ರಫಿಯಾ ಬೇಗಂ, ಶಾಂತಮ್ಮ, ವಿಶೇಷ ಅತಿಥಿ ಮಂಜುನಾಥಗೌಡ, ಶಾಲೆಯ ಕ್ರೀಡಾಕೂಟದ ವ್ಯವಸ್ಥಾಪಕಿ ಸುಮಿತ್ರಾ, ಅತಿಥಿ ಶಿಕ್ಷಕ ಲೋಕೇಶ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.


## ಸಾರ್ವಜನಿಕ ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, **ಶ್ರೀ ಸಿದ್ದರಾಮಪ್ಪ ತಂದೆ ಹಂಪಯ್ಯ ಸಾಹುಕಾರ್,** ನಿವಾಸ: ಮಾನ್ವಿ ತಾಲೂಕು, ರಾಯಚೂರು ಜಿಲ್ಲೆ, ಕರ್ನಾಟಕ ಇವರಿಗೆ ಸಂಬಂಧಿಸಿದ **ಮೂಲ ನಿವೇಶನ ಮಾರಾಟ ಪತ್ರ (Original Plot Sale Deed)**, ದಾಖಲೆ ಸಂಖ್ಯೆ: **288/2005-06** ದಿನಾಂಕ **01-05-2026** ರಂದು ಮಾನ್ವಿ ಪಟ್ಟಣದಲ್ಲಿ ಕಳೆದುಹೋಗಿರುತ್ತದೆ.

ಈ ಸಂಬಂಧ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ನಲ್ಲಿ ದೂರು ದಾಖಲಿಸಲಾಗಿದ್ದು, **Lost Report No. 2187346/2026, ದಿನಾಂಕ: 05-05-2026** ಆಗಿರುತ್ತದೆ.

ಆದ್ದರಿಂದ ಮೇಲ್ಕಂಡ ಮೂಲ ಮಾರಾಟ ಪತ್ರ ಯಾರಿಗಾದರೂ ದೊರೆತಿದ್ದಲ್ಲಿ ಅಥವಾ ಅದರ ಬಗ್ಗೆ ಯಾವುದೇ ಮಾಹಿತಿ ಇದ್ದಲ್ಲಿ ಕೆಳಕಂಡ ಮೊಬೈಲ್ ಸಂಖ್ಯೆಗೆ ಸಂಪರ್ಕಿಸಿ ಸಂಬಂಧಪಟ್ಟ ಮಾಲೀಕರಿಗೆ ತಲುಪಿಸುವಂತೆ ಕೋರಲಾಗಿದೆ.

ಮೇಲ್ಕಂಡ ದಾಖಲೆಯನ್ನು ಯಾರೂ ಅನಧಿಕೃತವಾಗಿ ಬಳಸಬಾರದು. ಸದರಿ ದಾಖಲೆಗೆ ಸಂಬಂಧಿಸಿದಂತೆ ಯಾರಿಗಾದರೂ ಯಾವುದೇ ಹಕ್ಕು, ಆಕ್ಷೇಪಣೆ ಅಥವಾ ಮಾಹಿತಿ ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ **7 ದಿನಗಳೊಳಗಾಗಿ** ಸೂಕ್ತ ದಾಖಲೆಗಳೊಂದಿಗೆ ಸಂಬಂಧಪಟ್ಟವರಿಗೆ ಲಿಖಿತವಾಗಿ ತಿಳಿಸಬೇಕು. ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆ ಬಂದಿಲ್ಲದಿದ್ದಲ್ಲಿ, ಮುಂದಿನ ಅಗತ್ಯ ಕಾನೂನು/ದಾಖಲೆ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು.

**ಹೆಸರು: ಸಿದ್ದರಾಮಪ್ಪ ತಂದೆ ಹಂಪಯ್ಯ ಸಾಹುಕಾರ್**
**ವಿಳಾಸ: ಮಾನ್ವಿ ತಾಲೂಕು, ರಾಯಚೂರು ಜಿಲ್ಲೆ, ಕರ್ನಾಟಕ**
**ಮೊಬೈಲ್: 6364755291**
**ದಾಖಲೆ: Plot Sale Deed**
**ದಾಖಲೆ ಸಂಖ್ಯೆ: 288/2005-06**
**Lost Report No.: 2187346/2026**
**ದಿನಾಂಕ: 05-05-2026**

**ಸ್ಥಳ: ಮಾನ್ವಿ** **ಸಾರ್ವಜನಿಕ ಪ್ರಕಟಣೆದಾರರು / ಸಂಬಂಧಪಟ್ಟವರು**

# ಆಂಜನೇಯ ಸ್ವಾಮಿ ಜಾತ್ರೆಯಲ್ಲಿ ಎನ್.ಎಸ್. ಬೋಸರಾಜು, ಶಾಸಕ ಹಂಪಯ್ಯ ನಾಯಕ ಭಾಗಿ



ಮಾನ್ವಿ: ಮಾನ್ವಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ನೀರ್‌ಮಾನ್ವಿ ಗ್ರಾಮದಲ್ಲಿ ನಡೆದ ದೊಡ್ಡ ಊರು ಆಂಜನೇಯ ಸ್ವಾಮಿ ದೇವಸ್ಥಾನದ ಜಾತ್ರಾ ಮಹೋತ್ಸವದಲ್ಲಿ ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಮತ್ತು ಮಾನ್ವಿ ಶಾಸಕ ಜಿ. ಹಂಪಯ್ಯ ನಾಯಕ ಪಾಲ್ಗೊಂಡು ದೇವರ ದರ್ಶನ ಪಡೆದು ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಚನ್ನಪ್ಪಗೌಡ ಬೆಟ್ಟದೂರು, ಪಂಚ ಗ್ಯಾರಂಟಿಗಳ ಅಧ್ಯಕ್ಷ ಬಿ.ಕೆ. ಅಮರೇಶಪ್ಪ ವಕೀಲರು, ಜೆ. ಗೋಪಾಲ ನಾಯಕ, ಕಾಪಾಗಲ್ ಮುಸ್ತಫ, ಬೊಮ್ಮನಾಳ ನಾಗನಗೌಡ, ಆದ್ಯಪ್ಪಗೌಡ, ಸತ್ತಾರ್ ಬಂಗ್ಲೆವಾಲೆ, ತೋಟಪ್ಪ ಪೂಜಾರಿ, ಗ್ರಾಮದ ಮುಖಂಡರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪ್ರವಾದಿಗಳ ಸಂದೇಶ ಮಾನವೀಯತೆ ಮತ್ತು ಸೌಹಾರ್ದತೆ ಸಾರುತ್ತದೆ: ಅಕ್ಬರ್ ಅಲಿ ಉಡುಪಿ



ಮಾನ್ವಿ: ಪ್ರವಾದಿಗಳನ್ನು ಜಾತಿ, ಧರ್ಮ, ವರ್ಗ, ಪಂಗಡ ಅಥವಾ ಪಂಥಗಳಿಗೆ ಸೀಮಿತಗೊಳಿಸುವುದು ಮಹಾ ಅಪರಾಧವಾಗಿದೆ. ಪ್ರವಾದಿಗಳು ಮಾನವಕುಲದ ಒಳಿತಿಗಾಗಿ ದೇವರಿಂದ ಆಯ್ಕೆಯಾದವರು ಎಂದು ಜಮಾಅತೆ ಇಸ್ಲಾಮೀ ಹಿಂದ್ ಕರ್ನಾಟಕದ ರಾಜ್ಯ ಕಾರ್ಯದರ್ಶಿ ಅಕ್ಬರ್ ಅಲಿ ಉಡುಪಿ ಹೇಳಿದರು.

ಪಟ್ಟಣದ ಈದ್ಗಾ ಫಂಕ್ಷನ್ ಹಾಲ್‌ನಲ್ಲಿ ಜಮಾಅತೆ ಇಸ್ಲಾಮೀ ಹಿಂದ್ ತಾಲೂಕು ಸಮಿತಿ ವತಿಯಿಂದ ಸೀರತ್ ಅಭಿಯಾನ-2026ರ ಅಂಗವಾಗಿ ಹಮ್ಮಿಕೊಂಡಿದ್ದ ಪುಸ್ತಕ ಬಿಡುಗಡೆ ಸಮಾರಂಭ ಹಾಗೂ ಕ್ರಾಂತಿಯ ಜ್ಯೋತಿಪ್ರವಾದಿ ಮುಹಮ್ಮದ್ (ಸ) ವಿಷಯ ಕುರಿತ ವಿಚಾರಗೋಷ್ಠಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಗತ್ತಿನ ಹಿಂದೂ, ಮುಸ್ಲಿಂ, ಕ್ರೈಸ್ತ, ಯಹೂದಿ ಸೇರಿದಂತೆ ವಿವಿಧ ಧರ್ಮಗಳಲ್ಲಿ ಬಂದ ಪ್ರವಾದಿಗಳನ್ನು ದೇವರೇ ಆಯ್ಕೆ ಮಾಡಿ, ಜನಾಂಗದ ಒಳಿತಿಗಾಗಿ ತನ್ನ ಸಂದೇಶಗಳನ್ನು ತಿಳಿಸಲು ಕಳುಹಿಸಿದ್ದಾನೆ. ಸಮಾಜದಲ್ಲಿರುವ ಮೂಢನಂಬಿಕೆ, ಕಂದಾಚಾರ, ಮೌಢ್ಯ ಹಾಗೂ ಅನಾಚಾರಗಳನ್ನು ದೂರ ಮಾಡುವುದೇ ಅವರ ಸಂದೇಶದ ಪ್ರಮುಖ ಆಶಯವಾಗಿತ್ತು ಎಂದು ತಿಳಿಸಿದರು.

ಈ ಸತ್ಯವನ್ನು ಅರಿತುಕೊಂಡಾಗ ಮಾತ್ರ ಪ್ರತಿಯೊಬ್ಬರಲ್ಲೂ ಸೌಹಾರ್ದತೆ ಮೂಡಲು ಸಾಧ್ಯ. ಈ ಭೂಮಿಯಲ್ಲಿ ಪ್ರವಾದಿಗಳು ಮನುಷ್ಯರನ್ನು ಮನುಷ್ಯರೊಂದಿಗೆ ಜೋಡಿಸುವ ಕಾರ್ಯ ಮಾಡಿದ್ದು, ನಾವೆಲ್ಲರೂ ಒಂದೇ ಎಂಬ ಸಂದೇಶವನ್ನು ಸಾರಿದ್ದಾರೆ. ಪ್ರವಾದಿ ಮುಹಮ್ಮದ್ ಅವರು ಜಗತ್ತಿನ ಕೊನೆಯ ಪ್ರವಾದಿಯಾಗಿದ್ದು, ಮುಸ್ಲಿಂ ಸಮುದಾಯಕ್ಕೆ ಆದರ್ಶಪ್ರಾಯರಾಗಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಿಕಟಪೂರ್ವ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಹಾಗೂ ಸಾಹಿತಿ ಡಾ. ಬಸವಪ್ರಭು ಪಾಟೀಲ್ ಬೆಟ್ಟದೂರು, ಡಾ. ಅಂಬಿಕಾ ಮಾಧುಸುಧನ್ ಹಾಗೂ ಹಿರಿಯ ವರದಿಗಾರ ಪಿ. ಪರಮೇಶ ಮಾತನಾಡಿದರು.

ಯೋಗೇಶ್ ಮಾಸ್ಟರ್ ರಚಿಸಿದ ಮಾನವ ಮನಸ್ಸಿನ ಕೃಷಿಕಮನದೊಡೆಯ ಪ್ರವಾದಿ ಮುಹಮ್ಮದ್ ಹಾಗೂ ಅಬ್ದುಸ್ಸಲಾಮ್ ಪುತ್ತಿಗೆ ರಚಿಸಿದ ಸಮಗ್ರ ಕ್ರಾಂತಿಯ ಜ್ಯೋತಿ ಬೆಳಗಿದ ಪೈಗಂಬರ್ ಕೃತಿಗಳನ್ನು ಗಣ್ಯರು ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಈದ್ಗಾ ಕಮಿಟಿ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ರಾಬಿತಾ-ಎ-ಮಿಲ್ಲತ್ ತಾಲೂಕು ಅಧ್ಯಕ್ಷ ಸೈಯದ್ ಅಕ್ಬರ್ ಸಾಬ್, ವೆಲ್ಫೇರ್ ಪಾರ್ಟಿ ಜಿಲ್ಲಾಧ್ಯಕ್ಷ ಮೌಲಾನಾ ಶೇಖ್ ಫರೀದ್ ಉಮ್ರಿ, ಶಂಕರಯ್ಯಸ್ವಾಮಿ ಸುವರ್ಣಗಿರಿ ಮಠ, ಗುಮ್ಮ ಬಸವರಾಜ ವಕೀಲರು, ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಸುರೇಶ ಕುರ್ಡಿ, ಜಮಾಅತೆ ಇಸ್ಲಾಮೀ ಹಿಂದ್ ವಿಭಾಗೀಯ ಸಂಚಾಲಕ ಮೌಲಾನಾ ಅನ್ವರ್ ಪಾಷಾ ಉಮ್ರಿ, ಜಿಲ್ಲಾ ಸಂಚಾಲಕ ಅಬ್ದುಲ್ ಕರೀಮ್ ಖಾನ್ ಸಾಬ್, ತಾಲೂಕು ಅಧ್ಯಕ್ಷ ಅಬ್ದುಲ್ ರಹೆಮಾನ್, ಜಿಲ್ಲಾ ಸಂಚಾಲಕಿ ಸೈಯದಾ ನುಸ್ರತ್ ಜಹಾನ್, ಸಹ ಸಂಚಾಲಕಿ ಆಯಿಷಾ ಸಿದ್ದೀಖಾ, ಶೇಖ್ ಬಾಬಾ ಹುಸೇನ್ ಸಾಬ್, ಉಮರ್ ದೇವರಮನಿ ಸೇರಿದಂತೆ ವಿವಿಧ ಸಮುದಾಯಗಳ ಮುಖಂಡರು ಹಾಗೂ ಮುಸ್ಲಿಂ ಸಮುದಾಯದವರು ಭಾಗವಹಿಸಿದ್ದರು.

# ಆತ್ಮವಿಶ್ವಾಸವೇ ಸಾಧನೆಯ ಮೊದಲ ಹೆಜ್ಜೆ: ಡಾ. ಸುಗುಣ ಬಸವರಾಜ




ರಾಯಚೂರು, ಸೆ.5: ವಿದ್ಯಾರ್ಥಿಗಳು ಪದವಿ ಶಿಕ್ಷಣವನ್ನು ಆತ್ಮವಿಶ್ವಾಸದಿಂದ ಆರಂಭಿಸಿ, ಮೌಲ್ಯ ಶಿಕ್ಷಣ, ಸಂವಹನ ಕೌಶಲ್ಯ, ಡಿಜಿಟಲ್ ಕೌಶಲ್ಯ ಹಾಗೂ ತಾರ್ಕಿಕ ಚಿಂತನೆಗಳನ್ನು ಬೆಳೆಸಿಕೊಂಡರೆ ಇಂದಿನ ಕೌಶಲ್ಯಾಧಾರಿತ ಮತ್ತು ಸ್ಪರ್ಧಾತ್ಮಕ ಯುಗದಲ್ಲಿ ಯಶಸ್ಸು ಸಾಧಿಸಬಹುದು ಎಂದು ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲೆ ಡಾ. ಸುಗುಣ ಬಸವರಾಜ ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಪ್ರಾಯೋಜಿತ ಹೊಸ ದಿಗಂತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಉದ್ಘಾಟಿಸಿ ಮಾತನಾಡಿದ ಅವರು, ಪ್ರಥಮ ವರ್ಷದ ವಿದ್ಯಾರ್ಥಿನಿಯರು ಪದವಿ ಶಿಕ್ಷಣದ ಆರಂಭದಲ್ಲೇ ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು. ಜೀವನದಲ್ಲಿ ಯಶಸ್ಸು ಸಾಧಿಸಲು ಪಠ್ಯಜ್ಞಾನದ ಜತೆಗೆ ವಿವಿಧ ಕೌಶಲ್ಯಗಳನ್ನು ಮೈಗೂಡಿಸಿಕೊಳ್ಳುವುದು ಅಗತ್ಯ ಎಂದು ತಿಳಿಸಿದರು. ಇಲಾಖೆಯಿಂದ ಕಾಲೇಜಿನಲ್ಲಿ ಆಯೋಜಿಸಿರುವ ಹೊಸ ದಿಗಂತ ಕಾರ್ಯಕ್ರಮ ವಿದ್ಯಾರ್ಥಿಗಳ ಸಮಗ್ರ ಬೆಳವಣಿಗೆಗೆ ಪೂರಕವಾಗಿದೆ ಎಂದು ಅಭಿಪ್ರಾಯಪಟ್ಟರು.

ಹೊಸ ದಿಗಂತ ಕಾರ್ಯಕ್ರಮದ ಸಂಯೋಜಕ ಹಾಗೂ ಕನ್ನಡ ಸಹಾಯಕ ಪ್ರಾಧ್ಯಾಪಕ ಡಾ. ಚನ್ನಬಸವ ಮಾಡಗಿರಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾಲೇಜಿನ ಐಕ್ಯೂಎಸಿ ಸಂಚಾಲಕಿ ಹಾಗೂ ಭೌತಶಾಸ್ತ್ರ ವಿಷಯದ ಸಹ ಪ್ರಾಧ್ಯಾಪಕಿ ಡಾ. ಜ್ಯೋತಿ ಮಾತನಾಡಿ, ಪದವಿ ಶಿಕ್ಷಣದ ಪಯಣದಲ್ಲಿ ವಿದ್ಯಾರ್ಥಿಗಳು ಪ್ರಬುದ್ಧತೆ ಹಾಗೂ ಕೌಶಲ್ಯಾಧಾರಿತವಾಗಿ ವಿಕಸನಗೊಳ್ಳಬೇಕು. ಅದಕ್ಕಾಗಿ ಕೌಶಲ್ಯ ಜ್ಞಾನ ಮತ್ತು ಆತ್ಮವಿಶ್ವಾಸ ಅತ್ಯಗತ್ಯವಾಗಿದ್ದು, ಈ ಕಾರ್ಯಕ್ರಮ ವಿದ್ಯಾರ್ಥಿಗಳಲ್ಲಿ ಅವುಗಳನ್ನು ಬೆಳೆಸಲು ಸಹಕಾರಿಯಾಗಿದೆ ಎಂದರು.

ಐಕ್ಯೂಎಸಿ ಸಹ ಸಂಚಾಲಕ ಹಾಗೂ ಗಣಕ ವಿಜ್ಞಾನ ವಿಭಾಗದ ಸಹ ಪ್ರಾಧ್ಯಾಪಕ ಶರಣಗೌಡ ಮಾತನಾಡಿ, ಬದಲಾಗುತ್ತಿರುವ ಸಮಾಜ ಮತ್ತು ತಂತ್ರಜ್ಞಾನಕ್ಕೆ ವಿದ್ಯಾರ್ಥಿಗಳು ಹೊಂದಿಕೊಳ್ಳುವುದು ಅನಿವಾರ್ಯವಾಗಿದೆ. ವಿದ್ಯೆಯ ಜತೆಗೆ ಕೌಶಲ್ಯಕ್ಕೂ ಸಮಾನ ಮಹತ್ವ ನೀಡಬೇಕಾಗಿದೆ. ಇಂತಹ ಹೊಸ ಚಿಂತನೆಯ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಜೀವನದಲ್ಲಿ ಆತ್ಮವಿಶ್ವಾಸ ಹಾಗೂ ಆಶಾಕಿರಣ ಮೂಡಿಸಲಿ ಎಂದು ಹೇಳಿದರು.

ದೈಹಿಕ ಶಿಕ್ಷಣ ನಿರ್ದೇಶಕ ಡಾ. ಪ್ರಸನ್ನ ಕುಮಾರ ಮಾತನಾಡಿ, ಸದೃಢ ದೇಹದಲ್ಲಿ ಸದೃಢ ಮನಸ್ಸು ಇರುತ್ತದೆ. ವಿದ್ಯಾರ್ಥಿಗಳು ಉತ್ತಮ ಆರೋಗ್ಯ ಕಾಪಾಡಿಕೊಂಡು ಕೌಶಲ್ಯಾಧಾರಿತ ಜೀವನ ನಡೆಸುವ ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಡಾ. ರಶೀದಾ, ಡಾ. ರಂಗನಾಥ ಬಿಲ್ಲಾರ್, ಡಾ. ಸ್ವರೂಪರಾಣಿ, ಡಾ. ಉಮಾದೇವಿ, ಸುಮಿತ್ರಾ ಪ್ಯಾಟಿ, ಸಹಾಯಕ ಪ್ರಾಧ್ಯಾಪಕ ಡಾ. ಸಂತೋಷ ರೇವೂರು, ಸರಸ್ವತಿ, ಉಪನ್ಯಾಸಕರಾದ ಡಾ. ಅಳ್ಳಪ್ಪ, ಡಾ. ಪುಷ್ಪವತಿ, ಡಾ. ಪ್ರಕಾಶ ಬುದ್ಧಿನ್ನಿ, ಡಾ. ರೇಖಾ ಪಾಟೀಲ್, ಡಾ. ಶ್ರೀಕಾಂತ, ಕಾಲೇಜಿನ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಕುಮಾರಿ ನಯನ ಮತ್ತು ಸಂಗಡಿಗರು ಪ್ರಾರ್ಥನಾ ಗೀತೆ ಹಾಡಿದರು. ಡಾ. ಪ್ರಕಾಶ ಬುದ್ಧಿನ್ನಿ ಸ್ವಾಗತಿಸಿದರು. ಡಾ. ಅಳ್ಳಪ್ಪ ಕಾರ್ಯಕ್ರಮ ನಿರೂಪಿಸಿದರು. ಡಾ. ಪುಷ್ಪವತಿ ವಂದಿಸಿದರು.

# ದರ್ವೇಶ್ ಗ್ರೂಪ್ ಹೂಡಿಕೆದಾರರ ಹಣ ಮರುಪಾವತಿಗೆ ತ್ವರಿತ ಕ್ರಮಕ್ಕೆ ಒತ್ತಾಯ



ರಾಯಚೂರು, ಸೆ.5: ದರ್ವೇಶ್ ಗ್ರೂಪ್ ಕಂಪನಿಯಲ್ಲಿ ಹೂಡಿಕೆ ಮಾಡಿರುವ ಸಾವಿರಾರು ಹೂಡಿಕೆದಾರರ ಹಣವನ್ನು ಕಾನೂನುಬದ್ಧವಾಗಿ ಮರುಪಾವತಿಸಲು ಸರ್ಕಾರ ತ್ವರಿತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ದರ್ವೇಶ್ ಕಂಪನಿ ಹೂಡಿಕೆದಾರರ ಹಿತಾಸಕ್ತಿ ವೇದಿಕೆ ವತಿಯಿಂದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರಿಗೆ ಶನಿವಾರ ಮನವಿ ಸಲ್ಲಿಸಲಾಯಿತು.

ನಗರದ ರಂಗಮಂದಿರದಲ್ಲಿ ಅಂಬಾಜಿರಾವ್ ಅವರ ನೇತೃತ್ವದಲ್ಲಿ ಸಚಿವರಿಗೆ ಮನವಿ ಸಲ್ಲಿಸಿದ ಹೂಡಿಕೆದಾರರು, ಸುಮಾರು ಎರಡೂವರೆ ವರ್ಷಗಳಿಂದ ತಮ್ಮ ಹೂಡಿಕೆ ಹಣಕ್ಕಾಗಿ ಕಾಯುತ್ತಿರುವುದಾಗಿ ತಿಳಿಸಿದರು. ಜೀವನಪೂರ್ತಿ ದುಡಿದು ಉಳಿಸಿದ ಹಣ, ಮಕ್ಕಳ ಶಿಕ್ಷಣ, ಕುಟುಂಬದ ಭವಿಷ್ಯ ಹಾಗೂ ಇತರೆ ಅಗತ್ಯಗಳಿಗಾಗಿ ಮೀಸಲಿಟ್ಟ ಉಳಿತಾಯವನ್ನು ದರ್ವೇಶ್ ಗ್ರೂಪ್‌ನಲ್ಲಿ ಹೂಡಿಕೆ ಮಾಡಿದ್ದು, ಇದುವರೆಗೂ ಅನೇಕ ಹೂಡಿಕೆದಾರರಿಗೆ ಸಂಪೂರ್ಣ ಹಣ ಮರುಪಾವತಿಯಾಗಿಲ್ಲ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಹಣ ಮರುಪಾವತಿಯಾಗದ ಕಾರಣ ಸಾವಿರಾರು ಕುಟುಂಬಗಳು ಆರ್ಥಿಕ ಸಂಕಷ್ಟ, ಸಾಲದ ಹೊರೆ ಹಾಗೂ ಮಾನಸಿಕ ಒತ್ತಡಕ್ಕೆ ಒಳಗಾಗಿವೆ. ಪ್ರಕರಣದ ತನಿಖೆ ನಡೆಯುತ್ತಿದ್ದು, ತನಿಖೆ ಹಾಗೂ ಕಾನೂನು ಪ್ರಕ್ರಿಯೆಯಲ್ಲಿ ಆಗುತ್ತಿರುವ ವಿಳಂಬದಿಂದ ಹೂಡಿಕೆದಾರರಲ್ಲಿ ಆತಂಕ ಹೆಚ್ಚಾಗಿದೆ ಎಂದು ಅವರು ಹೇಳಿದ್ದಾರೆ.

ಪ್ರಕರಣದ ತನಿಖೆಯನ್ನು ತ್ವರಿತವಾಗಿ ಪೂರ್ಣಗೊಳಿಸಿ, ಹೂಡಿಕೆದಾರರಿಂದ ಸಂಗ್ರಹಿಸಲಾದ ಹಣದ ಜಾಡು, ಸಂಬಂಧಪಟ್ಟ ಬ್ಯಾಂಕ್ ಖಾತೆಗಳು, ಹಣಕಾಸು ವ್ಯವಹಾರಗಳು ಹಾಗೂ ಪತ್ತೆಯಾಗುವ ಆಸ್ತಿಗಳ ಕುರಿತು ಕಾನೂನುಬದ್ಧ ಕ್ರಮ ಕೈಗೊಳ್ಳಬೇಕು. ತನಿಖೆಯಲ್ಲಿ ಪತ್ತೆಯಾಗುವ ಹಣ ಮತ್ತು ಆಸ್ತಿಗಳನ್ನು ಕಾನೂನಿನ ಪ್ರಕಾರ ಮರುಪಡೆಯುವ ಮೂಲಕ ಅರ್ಹ ಹೂಡಿಕೆದಾರರಿಗೆ ಹಣ ಮರುಪಾವತಿಯಾಗುವಂತೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಹೂಡಿಕೆದಾರರ ಸಮಸ್ಯೆಯನ್ನು ಸರ್ಕಾರ ಹಾಗೂ ಉನ್ನತ ಅಧಿಕಾರಿಗಳ ಗಮನಕ್ಕೆ ತುರ್ತಾಗಿ ತಂದು, ಸಂಬಂಧಪಟ್ಟ ತನಿಖಾ ಸಂಸ್ಥೆಗಳಿಂದ ಸಮಯಬದ್ಧ ಕ್ರಮ ಕೈಗೊಳ್ಳುವಂತೆ ಸೂಚಿಸಬೇಕು. ಹೂಡಿಕೆದಾರರ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಪ್ರಕರಣದ ಪ್ರಗತಿಯ ಕುರಿತು ಮಾಹಿತಿ ನೀಡುವುದರ ಜೊತೆಗೆ ಅವರ ನ್ಯಾಯಯುತ ಹೋರಾಟಕ್ಕೆ ನೈತಿಕ ಹಾಗೂ ಸಾರ್ವಜನಿಕ ಬೆಂಬಲ ನೀಡಬೇಕು ಎಂದು ಸಚಿವರಲ್ಲಿ ಮನವಿ ಮಾಡಿದರು.

"ನಮ್ಮ ಹೋರಾಟ ಯಾವುದೇ ರಾಜಕೀಯ ಪಕ್ಷ ಅಥವಾ ವ್ಯಕ್ತಿಯ ವಿರುದ್ಧವಲ್ಲ. ಸಾವಿರಾರು ಕುಟುಂಬಗಳು ಕಷ್ಟಪಟ್ಟು ಸಂಪಾದಿಸಿದ ಹಣ ಮತ್ತು ಅವರ ಭವಿಷ್ಯಕ್ಕಾಗಿ ನಡೆಯುತ್ತಿರುವ ನ್ಯಾಯದ ಹೋರಾಟವಾಗಿದೆ. ಸರ್ಕಾರದಿಂದ ದಾನ ಅಥವಾ ಸಹಾಯ ಕೇಳುತ್ತಿಲ್ಲ. ನಮ್ಮದೇ ಹಣವನ್ನು ಕಾನೂನುಬದ್ಧವಾಗಿ ಮರಳಿ ಪಡೆಯಲು ಸರ್ಕಾರದ ಸಹಕಾರ ಮತ್ತು ನ್ಯಾಯವನ್ನು ಮಾತ್ರ ಕೋರುತ್ತಿದ್ದೇವೆ" ಎಂದು ಹೂಡಿಕೆದಾರರು ಮನವಿಯಲ್ಲಿ ತಿಳಿಸಿದ್ದಾರೆ.

ಮನವಿ ಸ್ವೀಕರಿಸಿದ ಸಚಿವರು ಪ್ರಕರಣಕ್ಕೆ ಸಂಬಂಧಿಸಿದ ಅಹವಾಲನ್ನು ಪರಿಶೀಲಿಸಿ, ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರುವುದಾಗಿ ತಿಳಿಸಿದರು ಎಂದು ವೇದಿಕೆಯ ಪದಾಧಿಕಾರಿಗಳು ಹೇಳಿದರು.

ಈ ಸಂದರ್ಭದಲ್ಲಿ ಅಂಬಾಜಿರಾವ್ ಸೇರಿದಂತೆ ದರ್ವೇಶ್ ಗ್ರೂಪ್‌ನಲ್ಲಿ ಹೂಡಿಕೆ ಮಾಡಿರುವ ಹಲವಾರು ಹೂಡಿಕೆದಾರರು ಉಪಸ್ಥಿತರಿದ್ದರು.

# ಹೊಸ ವಿದ್ಯಾರ್ಥಿನಿಯರಿಗೆ ಓರಿಯೆಂಟೇಶನ್ ಕಾರ್ಯಕ್ರಮ



ರಾಯಚೂರು, ಸೆ.5: ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಆಂತರಿಕ ಗುಣಮಟ್ಟ ಭರವಸೆ ಕೋಶದ ಅಡಿಯಲ್ಲಿ 2026-27ನೇ ಸಾಲಿಗೆ ಪ್ರವೇಶ ಪಡೆದ ವಿದ್ಯಾರ್ಥಿನಿಯರಿಗೆ ಓರಿಯೆಂಟೇಶನ್ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಬಿ.ಎ., ಬಿ.ಎಸ್‌ಸಿ., ಬಿ.ಕಾಂ. ಹಾಗೂ ಬಿಸಿಎ ವಿಭಾಗಗಳ ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಕಾಲೇಜಿನ ವಿವಿಧ ವಿಭಾಗಗಳ ಮುಖ್ಯಸ್ಥರು ತಮ್ಮ ತಮ್ಮ ವಿಷಯಗಳ ಕುರಿತು ಮಾಹಿತಿ ನೀಡಿದರಲ್ಲದೆ, ವಿವಿಧ ಘಟಕಗಳ ಸಂಯೋಜಕರ ಕರ್ತವ್ಯಗಳು ಹಾಗೂ ಕಾರ್ಯವೈಖರಿಯ ಬಗ್ಗೆ ವಿದ್ಯಾರ್ಥಿನಿಯರಿಗೆ ಪರಿಚಯಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲೆ ಡಾ. ಸುಗುಣ ಬಸವರಾಜ ಮಾತನಾಡಿ, ಕಾಲೇಜಿನಲ್ಲಿ ನಡೆಯುವ ವಿವಿಧ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿನಿಯರು ಸಕ್ರಿಯವಾಗಿ ಪಾಲ್ಗೊಂಡು ಅವುಗಳ ಸದುಪಯೋಗ ಪಡೆದುಕೊಳ್ಳಬೇಕು. ಶಿಕ್ಷಣದ ಜೊತೆಗೆ ಶಿಸ್ತಿಗೂ ಹೆಚ್ಚಿನ ಮಹತ್ವ ನೀಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಐಕ್ಯೂಎಸಿ ಸಂಚಾಲಕಿ ಡಾ. ಜ್ಯೋತಿ ಸಿ.ಕೆ., ಸಹ ಸಂಚಾಲಕ ಶರಣಗೌಡ ಕೆ., ಸಹ ಪ್ರಾಧ್ಯಾಪಕರಾದ ಡಾ. ಸೈಯಿದಾ ರಷೀದಾ ಪರ್ವಿನ್, ಡಾ. ಸ್ವರೂಪರಾಣಿ, ಡಾ. ಉಮಾದೇವಿ, ಸುಮಿತ್ರಾ ಪ್ಯಾಟಿ, ರಂಗನಾಥ ಬಿಲ್ಲಾರ್, ಸಹಾಯಕ ಪ್ರಾಧ್ಯಾಪಕರಾದ ಡಾ. ಸಂತೋಷಕುಮಾರ, ಸರಸ್ವತಿ, ಡಾ. ಆಸ್ಮಾ, ಡಾ. ಚನ್ನಬಸವ, ದೈಹಿಕ ಶಿಕ್ಷಣ ನಿರ್ದೇಶಕ ಡಾ. ಪ್ರಸನ್ನಕುಮಾರ ಹಾಗೂ ಗ್ರಂಥಪಾಲಕ ಡಾ. ಸುರೇಶ ಪಾಟೀಲ್ ಉಪಸ್ಥಿತರಿದ್ದರು.

ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿನಿಯರು ಭಾಗವಹಿಸುವ ಮೂಲಕ ಕಾರ್ಯಕ್ರಮ ಯಶಸ್ವಿಯಾಯಿತು.

# ನಿವೃತ್ತ ಹಿರಿಯ ಶಿಕ್ಷಕ ಸೂಗೂರಯ್ಯ ಸ್ವಾಮಿಗೆ ಶಿಕ್ಷಕರ ದಿನಾಚರಣೆ ಗೌರವ



ಸಿಂಧನೂರು: ಶಿಕ್ಷಣ ಕ್ಷೇತ್ರದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರಾಗಿ, ಮುಖ್ಯಗುರುಗಳಾಗಿ ಹಾಗೂ ಪ್ರೌಢಶಾಲಾ ಶಿಕ್ಷಕರಾಗಿ ಸುದೀರ್ಘ ಮತ್ತು ಯಶಸ್ವಿ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಹಿರಿಯ ಶಿಕ್ಷಕ ಸೂಗೂರಯ್ಯ ಸ್ವಾಮಿ ಅವರನ್ನು ಶಿಕ್ಷಕರ ದಿನಾಚರಣೆ ಅಂಗವಾಗಿ ತಾಲ್ಲೂಕು ನಿವೃತ್ತ ನೌಕರರ ಸಂಘದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ನಗರದ ನಿವೃತ್ತ ನೌಕರರ ಸಂಘದ ಕಚೇರಿಯಲ್ಲಿ ನಡೆದ ಸರಳ ಹಾಗೂ ಅರ್ಥಪೂರ್ಣ ಸಮಾರಂಭದಲ್ಲಿ ಸೂಗೂರಯ್ಯ ಸ್ವಾಮಿ ಅವರ ಶಿಕ್ಷಣ ಕ್ಷೇತ್ರದ ನಿಷ್ಠಾವಂತ ಸೇವೆಯನ್ನು ಸ್ಮರಿಸಿ, ಸಂಘದ ಪದಾಧಿಕಾರಿಗಳು ಶಾಲು ಹೊದಿಸಿ ಆತ್ಮೀಯವಾಗಿ ಗೌರವಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಿವೃತ್ತ ನೌಕರರ ಸಂಘದ ಹಿರಿಯ ಉಪಾಧ್ಯಕ್ಷ ಬಸವರಾಜ ವಿ. ಮಾತನಾಡಿ, ಸೂಗೂರಯ್ಯ ಸ್ವಾಮಿ ಅವರು ಸರಳ ಹಾಗೂ ಸಜ್ಜನ ವ್ಯಕ್ತಿತ್ವದವರಾಗಿದ್ದು, ತಮ್ಮ ಸುದೀರ್ಘ ಸೇವಾ ಅವಧಿಯಲ್ಲಿ ಅಸಂಖ್ಯಾತ ಶಿಷ್ಯ ಬಳಗವನ್ನು ರೂಪಿಸಿದ್ದಾರೆ. ನಿವೃತ್ತಿಯ ನಂತರವೂ ಸದಾ ಉತ್ಸಾಹದಿಂದ ಸಮಾಜಮುಖಿಯಾಗಿ ತೊಡಗಿಸಿಕೊಂಡಿರುವ ಅವರ ಜೀವನ ಎಲ್ಲರಿಗೂ ಆದರ್ಶಪ್ರಾಯವಾಗಿದೆ ಎಂದು ಶ್ಲಾಘಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಸೂಗೂರಯ್ಯ ಸ್ವಾಮಿ, ಶಿಕ್ಷಕ ವೃತ್ತಿ ನನಗೆ ಅಪಾರ ಆತ್ಮತೃಪ್ತಿ ನೀಡಿದೆ. ನಿವೃತ್ತಿಯ ನಂತರವೂ ಸಹೋದ್ಯೋಗಿಗಳು ಹಾಗೂ ನಿವೃತ್ತ ನೌಕರರ ಸಂಘವು ನನ್ನ ಸೇವೆಯನ್ನು ಗುರುತಿಸಿ, ಶಿಕ್ಷಕರ ದಿನಾಚರಣೆಯಂದೇ ಗೌರವಿಸಿರುವುದು ಅತ್ಯಂತ ಸಂತಸ ತಂದಿದೆ ಎಂದು ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಹಿರಿಯ ದೈಹಿಕ ಶಿಕ್ಷಣ ಶಿಕ್ಷಕ ಗಂಗಾಧರ ಕೌದಿ, ನಿವೃತ್ತ ಪ್ರೌಢಶಾಲಾ ಮುಖ್ಯ ಶಿಕ್ಷಕ ಬೀರಪ್ಪ ಶಂಭೋಜಿ, ನಿವೃತ್ತ ನೌಕರರ ಸಂಘದ ಮಾಜಿ ಅಧ್ಯಕ್ಷ ಹುಲಗಪ್ಪ, ಕಾರ್ಯದರ್ಶಿ ವೆಂಕಟರೆಡ್ಡಿ, ನೀರಾವರಿ ಇಲಾಖೆಯ ಅಂಬಣ್ಣ, ಶಿವಬಸಪ್ಪ, ಪ್ರಭು ಶಂಬೇವಾಡ್, ಸೈಯದ್ ಅಬ್ರಹಾಂ ಅಹಮದ್, ನಿವೃತ್ತ ಪಿಎಸ್‌ಐ ಬಸವರಾಜ, ಹುಸೇನಬಾಷಾ, ಹುಸೇನಪ್ಪ, ಚಂದ್ರಶೇಖರ್ ಕಗ್ಗೋಡ, ಅಬ್ದುಲ್ ರಹೀಮ್, ಸಿದ್ದಯ್ಯ, ತಿಮ್ಮಾರೆಡ್ಡಿ, ಬಸಯ್ಯಸ್ವಾಮಿ, ತ್ರಿಶೂಲಧಾರಿಸ್ವಾಮಿ, ತಿಪ್ಪಣ್ಣ, ಪರಮಶಪ್ಪ, ಚಂದ್ರಕಲಾ, ಯಮನಮ್ಮ, ಸಿದ್ದೇಶ್ವರಿ ಸೇರಿದಂತೆ ಹಲವಾರು ನಿವೃತ್ತ ನೌಕರರು ಉಪಸ್ಥಿತರಿದ್ದರು.

# ಮುಂಗಾರು ಬೆಳೆಗಳ ತುರ್ತು ಜಿಪಿಎಸ್ ಸಮೀಕ್ಷೆ ನಡೆಸಿ ಪರಿಹಾರ ಕೊಡಿ: ಮಲ್ಲಿಕಾರ್ಜುನ ಜಕ್ಕಲದಿನ್ನಿ



ಸಿರವಾರ : ತಾಲ್ಲೂಕಿನಾದ್ಯಂತ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಸಮರ್ಪಕ ಮಳೆಯಾಗದೆ ಹಾಗೂ ಕಾಲುವೆಗಳಿಗೆ ನೀರು ಹರಿಯದೆ ಹತ್ತಿ, ಭತ್ತ, ತೊಗರಿ ಸೇರಿದಂತೆ ವಿವಿಧ ಬೆಳೆಗಳು ಒಣಗಿ ನಾಶವಾಗುವ ಹಂತ ತಲುಪಿವೆ. ಇದರಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಅನಿವಾರ್ಯವಾಗಿ ಒಣಗುತ್ತಿರುವ ಮುಂಗಾರು ಬೆಳೆಗಳನ್ನು ತೆರವುಗೊಳಿಸಿ ಪರ್ಯಾಯ ಬೆಳೆ ಬೆಳೆಯಲು ಮುಂದಾಗಿದ್ದಾರೆ.

ಮುಂಗಾರು ಹಂಗಾಮಿನಲ್ಲಿ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ಬೆಳೆ ವಿಮೆ ಪಾವತಿಸಿರುವ ರೈತರ ಬೆಳೆಗಳನ್ನು, ಅವರು ತೆರವುಗೊಳಿಸುವ ಮುನ್ನವೇ ತುರ್ತಾಗಿ ಜಿಪಿಎಸ್ ಆಧಾರಿತ ಸಮೀಕ್ಷೆ ಹಾಗೂ ಸ್ಥಳ ಪರಿಶೀಲನೆ ನಡೆಸಿ ದಾಖಲಿಸಬೇಕು ಎಂದು ಬಿಜೆಪಿ ರಾಯಚೂರು ಜಿಲ್ಲಾ ಉಪಾಧ್ಯಕ್ಷ ಜಕ್ಕಲದಿನ್ನಿ ಮಲ್ಲಿಕಾರ್ಜುನ ಅವರು ಜಿಲ್ಲಾ ಆಡಳಿತಕ್ಕೆ ಒತ್ತಾಯಿಸಿದ್ದಾರೆ.

ರೈತರು ಬೆಳೆ ತೆರವುಗೊಳಿಸಿದ ನಂತರ ಸಮೀಕ್ಷೆ ನಡೆಸಿದರೆ ನೈಜ ಬೆಳೆ ಹಾನಿ ದಾಖಲಿಸಲು ತೊಂದರೆಯಾಗುವ ಸಾಧ್ಯತೆ ಇದ್ದು, ಇದರಿಂದ ಅರ್ಹ ರೈತರು ಬೆಳೆ ವಿಮೆ ಪರಿಹಾರದಿಂದ ವಂಚಿತರಾಗುವ ಆತಂಕವಿದೆ. ಆದ್ದರಿಂದ ತಾಲ್ಲೂಕಿನ ಮಳೆ ಆಶ್ರಿತ ಹಾಗೂ ಕಾಲುವೆ ನೀರು ಆಶ್ರಿತ ಪ್ರದೇಶಗಳಲ್ಲಿ ತಕ್ಷಣ ಜಿಪಿಎಸ್ ಸಮೀಕ್ಷೆ ನಡೆಸಿ ಬೆಳೆ ಹಾನಿ ದಾಖಲಿಸಬೇಕು.

ಅಲ್ಲದೆ, ಸಿರವಾರ ತಾಲ್ಲೂಕಿನ ನೈಜ ಬೆಳೆ ಹಾನಿಯ ವರದಿಯನ್ನು ಸರ್ಕಾರಕ್ಕೆಸಲ್ಲಿಸಿ, ತಾಲ್ಲೂಕನ್ನುಬರಪೀಡಿತಪ್ರದೇಶವೆಂದು ಘೋಷಿಸಿದೆ. ಬೆಳೆ ವಿಮೆ ಪಾವತಿಸಿರುವ ಅರ್ಹ ರೈತರಿಗೆ ನಿಯಮಾನುಸಾರ ಬೆಳೆ ವಿಮೆ ಹಾಗೂ ಸರ್ಕಾರದಿಂದ ದೊರೆಯಬೇಕಾದ ಪರಿಹಾರವನ್ನು ವಿಳಂಬವಿಲ್ಲದೆ ಒದಗಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

# ಗೌಳಿಪುರದಲ್ಲಿ ಗೋಶಾಲೆ ಮಂಜೂರಿಗೆ ಸಚಿವರಿಗೆ ಮನವಿ



ಲಿಂಗಸುಗೂರ: ಪುರಸಭೆ ವ್ಯಾಪ್ತಿಯ ಗೌಳಿಪುರದಲ್ಲಿ ಗೋಶಾಲೆ ಮಂಜೂರು ಮಾಡುವಂತೆ ಒತ್ತಾಯಿಸಿ ಗೌಟಿ ಸಮಾಜ ಅಭಿವೃದ್ಧಿ ಸೇವಾ ಸಂಘದ ಸದಸ್ಯರು ಸಮಾಜ ಕಲ್ಯಾಣ ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪ ಅವರಿಗೆ ಮನವಿ ಸಲ್ಲಿಸಿದರು.

ಪುರಸಭೆಯ ವಾರ್ಡ್ ನಂ.12ರ ಗೌಳಿಪುರದಲ್ಲಿ ಗೌಟಿ ಸಮಾಜದ ಸುಮಾರು 200 ಕುಟುಂಬಗಳು ವಾಸಿಸುತ್ತಿದ್ದು, ಬಹುತೇಕರು ಬಡ ಕುಟುಂಬಗಳಿಗೆ ಸೇರಿದ್ದಾರೆ. ಇಲ್ಲಿನ ಜನರು ಎಮ್ಮೆ, ಆಕಳು, ಆಡು, ಮೇಕೆ ಸೇರಿದಂತೆ ಸುಮಾರು 4ರಿಂದ 5 ಸಾವಿರ ಜಾನುವಾರುಗಳನ್ನು ಸಾಕಿಕೊಂಡು ಹೈನುಗಾರಿಕೆ ಮೂಲಕ ಕುಟುಂಬಗಳ ಜೀವನೋಪಾಯ ನಡೆಸುತ್ತಿದ್ದಾರೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಮಳೆ-ಬೆಳೆ ಕೊರತೆಯಿಂದ ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡುವುದು ಕಷ್ಟವಾಗಿದ್ದು, ಇದರಿಂದ ಹೈನುಗಾರಿಕೆಗೆ ತೀವ್ರ ತೊಂದರೆ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ಗೌಳಿಪುರದಲ್ಲಿ ಗೋಶಾಲೆಯ ಅಗತ್ಯತೆ ಹೆಚ್ಚಾಗಿದೆ ಎಂದು ಸಂಘದ ಸದಸ್ಯರು ಸಚಿವರ ಗಮನಕ್ಕೆ ತಂದರು.

ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ಸೂಚನೆ ನೀಡಿ ಗೌಳಿಪುರದಲ್ಲಿ ಗೋಶಾಲೆ ಮಂಜೂರು ಮಾಡುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲಾನಿ ಪಾಷಾ, ಮೌಲಾಸಾಬ ಸೇರಿದಂತೆ ಸಂಘದ ಸದಸ್ಯರು ಹಾಗೂ ಗೌಳಿಪುರ ನಿವಾಸಿಗಳು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನದಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದು: ನಿಖಿಲ್ ಖೇಣೇದ್



ದೇವದುರ್ಗ: ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ಅವರಲ್ಲಿ ಶಿಸ್ತು, ಆತ್ಮವಿಶ್ವಾಸ, ಉತ್ತಮ ವ್ಯಕ್ತಿತ್ವ, ಸೃಜನಶೀಲತೆ ಹಾಗೂ ನಾಯಕತ್ವ ಗುಣಗಳನ್ನು ಬೆಳೆಸುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ನಿಖಿಲ್ ಖೇಣೇದ್ ಹೇಳಿದರು.

ಪಟ್ಟಣದ ಹೊರವಲಯದಲ್ಲಿರುವ ಖೇಣೇದ್ ಇಂಟರ್‌ನ್ಯಾಷನಲ್ ಸ್ಕೂಲ್‌ನಲ್ಲಿ ಶನಿವಾರ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಶಿಕ್ಷಕರ ನಿರಂತರ ಪರಿಶ್ರಮ, ತಂಡದ ಮನೋಭಾವ ಹಾಗೂ ಸಮರ್ಪಣೆಯಿಂದ ಖೇಣೇದ್ ಇಂಟರ್‌ನ್ಯಾಷನಲ್ ಸ್ಕೂಲ್ ಶೈಕ್ಷಣಿಕವಾಗಿ ಮತ್ತಷ್ಟು ಉನ್ನತ ಮಟ್ಟಕ್ಕೆ ಬೆಳೆಯಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರು ನೀಡುತ್ತಿರುವ ಅಮೂಲ್ಯ ಕೊಡುಗೆ, ಸಮರ್ಪಣೆ ಹಾಗೂ ಸೇವೆಯನ್ನು ಸ್ಮರಿಸಲಾಯಿತು. ಇದೇ ಸಂದರ್ಭದಲ್ಲಿ ಅತ್ಯುತ್ತಮ ಸಾಧನೆ ಹಾಗೂ ಪರಿಣಾಮಕಾರಿ ಕಾರ್ಯನಿರ್ವಹಣೆ ತೋರಿದ ಶಿಕ್ಷಕರನ್ನು ಅಭಿನಂದಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ವ್ಯವಸ್ಥಾಪಕ ನಿರ್ದೇಶಕ ಸಿದ್ಲಿಂಗೇಶ್ವರ, ಪ್ರಾಂಶುಪಾಲೆ ಪ್ರಗತಿ, ಸಂಯೋಜಕ ಬಸವರಾಜ ಸೇರಿದಂತೆ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಭಾಗವಹಿಸಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K